ಸಂಪುಟ : 9 ಸಂಚಿಕೆ 227 ಪುಟ : 4 ಬೆಲೆ: 3.00 ಗುರುವಾರ ಅಕ್ಟೋಬರ್ 17 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 227 Pages : 4 Price : 3.00 Thursday October 17 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕಟ್ಟಡ ಮಾಲಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಗಜೇಂದ್ರಗಡ ಪಟ್ಟಣಕ್ಕೆ ಹೊಸದಾಗಿ ಮಂಜೂರಾಗಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯಕ್ಕೆ ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ 100 ವಿದ್ಯಾರ್ಥಿಗಳ ವಸತಿ ಸಾಮರ್ಥ್ಯ ಹೊಂದಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುವ ಬಾಡಿಗೆ ಕಟ್ಟಡದ ಅವಶ್ಯವಿದೆ.

ಕಟ್ಟಡವನ್ನು ಬಾಡಿಗೆ ನೀಡಲು ಬಯಸುವ ಮಾಲೀಕರು ಗದಗ ಉಪವಿಭಾಗ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲೂಕು ವಿಸ್ತರಣಾಧಿಕಾರಿಗಳನ್ನು ಅಕ್ಟೋಬರ್ 23ರ ಒಳಗಾಗಿ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ 9741921025 ಗೆ ಸಂಪರ್ಕಿಸಲು ಕೋರಲಾಗಿದೆ.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್ 17 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 - ಗಂಗಿಮಡಿ, 1700, 1600, 1800, 1500, 2000, 1900 ದೊಡ್ಡ ಮಸೂತಿ ಭಾಗದ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 15, 17 - ಡಿಸಿ ಮಿಲ್ ರೋಡ್, ಭಜಂತ್ರಿ ಓಣಿ, ಕರ್ನಾಟಕ ಟಾಕೀಸ್ ಲೈನ್, ಮಹೇಂದ್ರಕರ್ ಸರ್ಕಲ್, ಗಾಂಧಿ ಸರ್ಕಲ್, ಅಂಗನವಾಡಿ, ಜವಳಗಲ್ಲಿ, ಮೀನಿನ ಮಾರ್ಕೆಟ್, ಜವಳಿ ಬಜಾರ, ಬಸವೇಶ್ವರ ಗುಡಿ, ಗಣಪತಿ ಗುಡಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 21, 23 - ವಿಭೂತಿ ಓಣಿ, ಹನುಮಾನ ಗರಡಿ, ದ್ರೌಪದಿ ಬಾಯಿ, ಸೋಮನಗೌಡ್ರ, ದ್ಯಾಮವ್ವನ ಕಟ್ಟಿ, ಕಗನಳ್ಳಿ, ಆರೋಗೇರಿ ಭಾಗ-1,2 , ಹೆಬಸೂರ, ಹೊನ್ನತ್ತಮ್ಮ ಭಾಗ-1,2 , ಬಸವೇಶ್ವರ ಸರ್ಕಲ್, ಜಕ್ಕಲಿಯವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ 7 - ಪಿಂಡಕೋರರ ಲೈನ್, ತೆಂಗಿನಕಾಯಿ ಬಜಾರ, ಪುಲಿಕೇಶಿ ರೋಡ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅ.19ರಂದು ಕರೆ ನೀಡಿರುವ ಲಕ್ಷ್ಮೇಶ್ವರ ಬಂದ್ ಕೈಬಿಡಲು ವಿವಿಧ ಸಂಘಟನೆಗಳ ಒತ್ತಾಯ

# ಸಮಾಜದ ಶಾಂತಿ ಹದಗೆಡಿಸುವ ಹುನ್ನಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಅ.12ರಂದು ವಿಜಯದಶಮಿಯ ದಿವಸ ಎರಡು ಗುಂಪಿನ ನಡುವೆ ನಡೆದ ಸಣ್ಣ ಘಟನೆಯ ಕಾರಣವನ್ನಿಟ್ಟುಕೊಂಡು ದುರುದ್ದೇಶದಿಂದ ಶ್ರೀರಾಮಸೇನೆ ಹಲವರೊಡಗೂಡಿ ಅ.19ರಂದು ಲಕ್ಷ್ಮೇಶ್ವರ ಬಂದ್‌ಗೆ ಕರೆ ನೀಡಿದೆ. ಈ ಬಂದ್‌ನ್ನು ಹಿಂಪಡೆಯಬೇಕು ಎಂದು ಸಂಘಟನೆಗಳ ಮುಖಂಡರುಗಳಾದ ಸುರೇಶ ನಂದೆಣ್ಣವರ, ಕೋಟೆಪ್ಪ ವರ್ದಿ ಸೇರಿದಂತೆ ಅನೇಕರು ಎಚ್ಚರಿಸಿದ್ದಾರೆ.

ಬುಧವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬಂದ್ ಕರೆ ವಿರೋಧಿಸಿ ಮಾತನಾಡಿದ ಅವರು, ವಿಜಯದಶಮಿಯ ದಿನ ದುರ್ಗಾದೇವಿಯ ಮೆರವಣಿಗೆಯ ನಂತರ ಎರಡು ಕೋಮುಗಳ ನಡುವೆ ನಡೆದ ಸಣ್ಣ ಘಟನೆಯನ್ನೇ ದೊಡ್ಡದಾಗಿಸಿ ಸಮಾಜದ ಶಾಂತಿ ಹದಗೆಡಿಸುವ ಕಾರ್ಯ ಮಾಡುತ್ತಿರುವುದು ಸರಿಯಲ್ಲ. ಘಟನೆಯ ಬಳಿಕ ಶಾಂತಿ ಕಾಪಾಡಲು ಪೊಲೀಸ್ ಇಲಾಖೆ ಕೈಗೊಂಡ ಕ್ರಮವೇ ತಪ್ಪು ಎಂದು ಹೇಳುವುದು ಸೂಕ್ತವಲ್ಲ. ಆದಾಗ್ಯೂ ತಪ್ಪಾಗಿದ್ದರೆ ಅಂದಿನ ಘಟನೆಗೆ



ಕಾರಣರಾದವರ ಮೇಲೆ ಕಾನೂನು ಕ್ರಮ ಕೈಗೊಳ್ಳುವದಕ್ಕೆ ಮೇಲಾಧಿಕಾರಿಗಳಿಗೆ ದೂರು ಸಲ್ಲಿಸಿ, ಹಿರಿಯರೊಂದಿಗೆ ಚರ್ಚಿಸಿ ಮತ್ತು ಸಂಬಂಧಪಟ್ಟ ಇಲಾಖೆಯೊಂದಿಗೆ ಕಾನೂನಾತ್ಮಕ ಹೋರಾಟ ಮಾಡಬೇಕು.

ಬದಲಾಗಿ, ಒಂದು ಸಣ್ಣ ವಿಷಯಕ್ಕೆ ಲಕ್ಷ್ಮೇಶ್ವರ ಬಂದ್‌ಗೆ ಕರೆ ನೀಡುವುದರಿಂದ ರೈತರು, ವ್ಯಾಪಾರಸ್ಥರು, ವಿದ್ಯಾರ್ಥಿಗಳು ಸೇರಿದಂತೆ ಇಡೀ ಜನಜೀವನ ಅಸ್ತವ್ಯಸ್ತವಾಗುತ್ತದೆ. ಪೊಲೀಸ್ ಅಧಿಕಾರಿಯ ಮೇಲೆ ವಯಕ್ತಿಕ ಹಗೆ ಸಾಧನೆ ಮತ್ತು ಸುಳ್ಳು ಆರೋಪ ಮಾಡುವುದು ಬೇಡ. ಈ ಸಂಘಟನೆಗಳ ಮುಖಂಡರು ಮಾಡುವ ಅನಧಿಕೃತ ದಂಧೆಗಳ ಬಗ್ಗೆ ಎಲ್ಲರಿಗೂ ಗೊತ್ತಿದೆ. ಸಾರ್ವಜನಿಕ ಗಣಪತಿ ಪ್ರತಿಷ್ಠಾಪನೆಯ ಸಂದರ್ಭದಲ್ಲಿ ಇಸ್ಪೀಟ್ ಆಡುವ ವಿವಾದಾತ್ಮಕ ಹೇಳಿಕೆ ನೀಡಿರುವ ಶ್ರೀರಾಮ ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ ಈ ಹೇಳಿಕೆಯನ್ನು ಹಿಂಪಡೆದು ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

ಈ ವೇಳೆ ಸೋಮಣ್ಣ ಬೆಟಗೇರಿ, ಫಕ್ಕಿರೇಶ ಮ್ಯಾಟಣ್ಣವರ, ಪದ್ಮರಾಜ ಪಾಟೀಲ, ರಾಮಣ್ಣ ಲಮಾಣಿ(ಶಿಗ್ಲಿ), ತಿಪ್ಪಣ್ಣ ಸಂಶಿ, ಶರಣು ಗೊಡಿ, ಇಸ್ಮಾಯಿಲ್ ಅಡೂರ, ಸಂಗಯ್ಯ ಸಾಲಾವಳಿಮಠ, ಯಲ್ಲಪ್ಪ ತಳವಾರ, ನಾಗರಾಜ ಮಡಿವಾಳರ, ಸುರೇಶ ಹಟ್ಟಿ, ಮಂಜಣ್ಣ ಶೆರಸೂರಿ, ನೀಲಪ್ಪ ಪಡಗೇರಿ, ಯಲ್ಲಪ್ಪ ಸೂರಣಗಿ ನೀಲಪ್ಪ ಶರಸೂರಿ, ಸುರೇಶ ಹಟ್ಟಿ, ಸದಾನಂದ ನಂದೆಣ್ಣವರ, ಅಣ್ಣಪ್ಪ ರಾಮಗೇರಿ, ಬಸವರಡ್ಡಿ ಹನುಮರಡ್ಡಿ, ರಾಜು ಓಲೇಕಾರ, ನಾಗೇಶ ಅಮರಾಪುರ, ಹೊನ್ನಪ್ಪ ಒಡ್ಡರ ಸೇರಿದಮತೆ ಅನೇಕರಿದ್ದರು.

ಬಂದ್‌ನ ಮುಂದಾಳತ್ವ ವಹಿಸಲಿರುವ ಶ್ರೀರಾಮ ಸೇನೆಯ ಮುಖಂಡರಿಗೆ ಪೊಲೀಸರು ಲಕ್ಷ್ಮೇಶ್ವರಕ್ಕೆ ಬರದಂತೆ ತಡೆಯಬೇಕು. ಇಲ್ಲವಾದಲ್ಲಿ ನಾವೇ ತಡೆಯುತ್ತೇವೆ. ಒಂದು ವೇಳೆ ಬಂದ್ ನಿರ್ಧಾರ ಕೈ ಬಿಡದಿದ್ದರೆ ಪ್ರತಿಯಾಗಿ ಅಂದೇ ಪಕ್ಷಾತೀತ, ಜ್ಯಾತ್ಯಾತೀತ ಸಂಘಟನೆಗಳೊಡಗೂಡಿ ದೊಡ್ಡಮಟ್ಟದ ಹೋರಾಟಕ್ಕಿಳಿದು ಬಂದ್ ಕರೆ ವಿಫಲವಾಗಿಸಲು ನಾವು ಸಿದ್ಧರಾಗಿದ್ದೇವೆ ಎಂದರು.


### ನಗರಸಭೆಯ ಮುನ್ಸಿಪಲ್ ಮೈದಾನದಲ್ಲಿ ಮರೀಚಿಕೆಯಾದ ಸ್ವಚ್ಛತೆ । ಸಾರ್ವಜನಿಕರ ಆಕ್ರೋಶ

# ನಗರಸಭೆ ಆಸ್ತಿ: ನಿರ್ವಹಣೆ ನಾಸ್ತಿ!

■ವಿಜಯಸಾಕ್ಷಿ ಸುದ್ದಿ, ಗದಗ

ನಗರಸಭೆಯ ಮುನ್ಸಿಪಲ್ ಶಾಲಾ-ಕಾಲೇಜು ಎಂದರೆ ಹಲವರ ಪಾಲಿಗೆ ದೇವಾಲಯವಿದ್ದಂತೆ. ಇಲ್ಲಿ ವಿದ್ಯಾಭ್ಯಾಸ ಕಲಿತ ಅನೇಕರು ರಾಜಕೀಯವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಉನ್ನತ ಮಟ್ಟಕ್ಕೆ ಬೆಳೆದಿದ್ದಾರೆ. ಆದರೆ, ಇಂದು ಇದೇ ಶಾಲಾ-ಕಾಲೇಜು ಸೂಕ್ತ ನಿರ್ವಹಣೆಯಿಲ್ಲದೆ ಪಾಳುಬೀಳುವ ಹಂತಕ್ಕೆ ತಲುಪಿರುವುದು ಶೋಚನೀಯ.

ಹಲವು ವರ್ಷಗಳ ಹಿಂದೆ ಪ್ರತಿನಿತ್ಯ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಸಾರ್ವಜನಿಕರು ಆಗಮಿಸಿ ವಾಯು ವಿಹಾರ ಮಾಡುತ್ತಿದ್ದರು. ನಗರದ ಹೃದಯ





ಭಾಗದಲ್ಲಿರುವ ಮೈದಾನಗಳಲ್ಲಿ ಇದೂ ಒಂದು. ಸ್ವಚ್ಛಂದ ವಾತಾವರಣ ಎಲ್ಲರನ್ನೂ ಆಕರ್ಷಿಸುತ್ತದೆ. ಆದರೆ, ನಿರ್ವಹಣೆ ಕೊರತೆಯಿಂದಾಗಿ ಮೈದಾನದ ತುಂಬೆಲ್ಲ ಗಿಡ-ಗಂಟಿಗಳು ಬೆಳೆದು ಸಂಪೂರ್ಣವಾಗಿ ಹಾಳಾಗಿದೆ.

ಮೈದಾನದ ಸ್ವಚ್ಛತೆಯ ಬಗ್ಗೆ ಹಲವಾರು ಬಾರಿ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಅಧಿಕಾರಿಗಳು ಸ್ಪಂದಿಸುತ್ತಿಲ್ಲ. ಪ್ರಾರಂಭದಲ್ಲಿ ಯುವಕರ ಆಟೋಟಗಳಿಗೂ ಈ ಮೈದಾನ ಸಹಕಾರಿಯಾಗುತ್ತಿತ್ತು. ಮುನ್ಸಿಪಲ್ ಶಾಲಾ-ಕಾಲೇಜು ಮೈದಾನಕ್ಕೆ ಹೊಂದಿಕೊಂಡೇ ಅವಳಿ ನಗರದಾದ್ಯಂತ ಸಂಗ್ರಹಿಸುವ ಕಸ ವಿಲೇವಾರಿ ಕೂಡ ಇಲ್ಲಿಂದಲೇ ನಡೆಯುತ್ತಿದೆ. ಸ್ವಚ್ಛತೆಯ ಬಗ್ಗೆ ಸಾಕಷ್ಟು ಜಾಗೃತಿ ಮೂಡಿಸುವ ನಗರಸಭೆ ಅಧಿಕಾರಿಗಳೇ ತಮ್ಮ ವ್ಯಾಪ್ತಿಗೆ ಬರುವ ಮುನ್ಸಿಪಲ್ ಶಾಲಾ-ಕಾಲೇಜನ್ನು ಸ್ವಚ್ಛವಾಗಿರಿಸುವಲ್ಲಿ ವಿಫಲವಾಗಿರುವುದು ದುರ್ದೈವ.


ಆರೋಗ್ಯ ಇಲಾಖೆ, ನಗರಸಭೆ, ವಿವಿಧ ಸಂಘ-ಸಂಸ್ಥೆಗಳು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಇದೇ ಮೈದಾನದಿಂದ ಆರಂಭ ಮಾಡುತ್ತಾರೆ. ಆದರೆ, ಈ ಸ್ಥಳದಲ್ಲಿಯೇ ಸ್ವಚ್ಛತೆ ಇಲ್ಲದಂತಾಗಿದೆ. ಈ ಮಳೆಗಾಲದ ಸಮಯದಲ್ಲಂತೂ ಮೈದಾನದ ಅರ್ಧಭಾಗ ಜಲಾವೃತವಾಗಿರುತ್ತದೆ. ಇದರಿಂದ ಸೊಳ್ಳೆಗಳ ಸಂತಾನೋತ್ಪತ್ತಿ ಜಾಸ್ತಿಯಾಗಿ ಡೆಂಘಿ ಹರಡುವ ಸಾಧ್ಯತೆ ಕೂಡ ಹೆಚ್ಚಾಗಿರುತ್ತದೆ.

ಇನ್ನಾದರೂ ನಗರಸಭೆ ಅಧಿಕಾರಿಗಳು, ಸ್ಥಾಯಿ ಸಮಿತಿಯವರಾಗಲಿ ಮೈದಾನದ ಸ್ವಚ್ಛತೆಗೆ ಆದ್ಯತೆ ನೀಡಿ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಅನುವು ಮಾಡಿಕೊಡಬೇಕೆಂಬ ಅಭಿಪ್ರಾಯ ಕೇಳಿಬರುತ್ತಿದೆ.

> ಮುನ್ಸಿಪಲ್ ಶಾಲಾ-ಕಾಲೇಜಿನಲ್ಲಿ ಕಲಿತ ಹಲವರು ಇಂದು ಉನ್ನತ ಸ್ಥಾನದಲ್ಲಿದ್ದಾರೆ. ಇಂತಹ ಶಾಲಾ-ಕಾಲೇಜಿನ ವಾತಾವರಣ ಇತ್ತೀಚಿನ ದಿನಗಳಲ್ಲಿ ಹಾಳಾಗುತ್ತಿರುವುದು ಬೇಸರದ ಸಂಗತಿ. ಸ್ವಚ್ಛತೆಯ ಕೊರತೆಯಿಂದಾಗಿ ಇಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕ್ಷೀಣಿಸುತ್ತಿದೆ. ಸಂಬಂಧಿಸಿದ ಅಧಿಕಾರಿಗಳು ಎಚ್ಚೆತ್ತು ಸ್ವಚ್ಛತೆ ಕಾಪಾಡುವುದರೊಂದಿಗೆ ವಿದ್ಯಾರ್ಥಿಗಳ ಆರೋಗ್ಯದ ಕಡೆ ಗಮನಹರಿಸಬೇಕು. ಇಲ್ಲವಾದಲ್ಲಿ ವಿವಿಧ ಸಂಘಟನೆಗಳ ಜೊತೆಗೂಡಿ ಸಾರ್ವಜನಿಕರು ನಗರಸಭೆಗೆ ಮುತ್ತಿಗೆ ಹಾಕಬೇಕಾಗುತ್ತದೆ.
>
> **- ಪ್ರೊ. ಪ್ರವೀಣಕುಮಾರ ಚಪ್ಪರಮನಿ.**
> ಪ್ರಾಧ್ಯಾಪಕರು.

## ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ನಗರಸಭೆ ಗದಗ-ಬೆಟಗೇರಿ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಸಂಘ ಇವರುಗಳ ಸಂಯುಕ್ತ ಆಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ-2024ನ್ನು ಅಕ್ಟೋಬರ್ 17ರಂದು ಬೆಳಿಗ್ಗೆ 10.30 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದರಾದ ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ರಣದೀಪ ಡಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರಗಳ ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆಯ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ ಆಗಮಿಸುವರು.

ನಿಪ್ಪಾಣಿಯ ವಿ.ಎಸ್. ಎಂ.ಜಿ.ಆಯ್. ಬಾಗೇವಾಡಿ ಕಾಲೇಜಿನ ಪ್ರಾಚಾರ್ಯ ಡಾ. ಎನ್.ಎಸ್. ಮಾದಣ್ಣವರ ಶ್ರೀ ಮಹರ್ಷಿ ವಾಲ್ಮೀಕಿ ಆದರ್ಶಗಳ ಕುರಿತು ಉಪನ್ಯಾಸ ನೀಡಲಿದ್ದಾರೆ. ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

> ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.
>
> ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮದ ಉದ್ಘಾಟನೆ ಮತ್ತು ಅಧ್ಯಕ್ಷತೆ ವಹಿಸಲಿದ್ದಾರೆ.

### 'ವಿಶ್ವ ಆಹಾರ ದಿನಾಚರಣೆ' ಕಾರ್ಯಕ್ರಮದಲ್ಲಿ ಡಾ. ಆರ್.ವ್ಹಿ. ಹೆಗ್ಡೆ ಅಭಿಮತ

# ಸುಸ್ಥಿರ ಆಹಾರ ಪದ್ಧತಿ ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಲಕೋಟಿಯ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ವಿಶ್ವವಿದ್ಯಾಲಯ ಧಾರವಾಡ ಸಹಭಾಗಿತ್ವದಲ್ಲಿ, 'ಉತ್ತಮ ಜೀವನ ಮತ್ತು ಉತ್ತಮ ಭವಿಷ್ಯಕ್ಕಾಗಿ ಆಹಾರದ ಹಕ್ಕು' ಎಂಬ ಧ್ಯೇಯೋದ್ದೇಶದೊಂದಿಗೆ ವಿಶ್ವ ಆಹಾರ ದಿನಾಚರಣೆಯನ್ನು ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಕೃಷಿ ವಿಶ್ವವಿದ್ಯಾಲಯ ಧಾರವಾಡದ



ಪ್ರಾಧ್ಯಾಪಕ ಡಾ. ಆರ್.ವ್ಹಿ. ಹೆಗ್ಡೆ, ಪ್ರಸ್ತುತ ಆಹಾರ ಪದ್ಧತಿಯಲ್ಲಿ ನಾವು ಹಣ್ಣು ಮತ್ತು ತರಕಾರಿಗಳ ಸೇವನೆಗೆ ಹೆಚ್ಚು ಒತ್ತು ನೀಡಬೇಕು. ಆಹಾರವನ್ನು ವ್ಯರ್ಥ ಮಾಡದೇ ಅವಶ್ಯವಿದ್ದಷ್ಟು ಮಾತ್ರ ಸೇವಿಸಬೇಕು ಹಾಗೂ ಸುಸ್ಥಿರ ಆಹಾರ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವ್ಹಿ.ಮಂಕಣಿ ಮಾತನಾಡಿ, ಸಾಂಪ್ರದಾಯಕ ಆಹಾರ ಪದಾರ್ಥಗಳಾದ ಸಿರಿಧಾನ್ಯಗಳು, ಬೇಳೆ ಕಾಳುಗಳು ಹಾಗೂ ಹಸಿರು ತರಕಾರಿಗಳನ್ನು ದಿನನಿತ್ಯ ಸೇವಿಸಬೇಕು. ಅಪೌಷ್ಟಿಕ ಆಹಾರವನ್ನು ವರ್ಜಿಸಿ ಸಮತೋಲಿತ ಆಹಾರ ಸೇವನೆಯಿಂದ ಆರೋಗ್ಯ ಹಾಗೂ ಆಯಸ್ಸನ್ನು ವೃದ್ಧಿಸಿಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಎಸ್.ಬಿ.ಐ-ಎ.ಎಸ್.ಎಫ್-ಆರ್ಸೆಟಿ ನಿರ್ದೇಶಕರಾದ ಶಿವಕುಮಾರ, ಡಾ. ರಮ್ಯ, ಎನ್.ಎಚ್. ಭಂಡಿ, ಹೇಮಾವತಿ ಹಿರೇಗೌಡರ್, ಡಾ. ವಿನಾಯಕ ನಿರಂಜನ್ ಮತ್ತಿತರರು ಉಪಸ್ಥಿತರಿದ್ದರು. ಕೃಷಿ ವಿಶ್ವವಿದ್ಯಾಲಯದ ವಿದ್ಯಾರ್ಥಿನಿಯರು ಆಹಾರದ ಮಹತ್ವದ ಕುರಿತು ಕಿರುನಾಟಕವನ್ನು ಪ್ರದರ್ಶಿಸಿದರು.

ದೀಪಾ ಸ್ವಾಗತಿಸಿದರು, ನಾಗಾಂಜಲಿ ಮತ್ತು ನಂದಿನಿ ನಿರೂಪಿಸಿದರು. ಜ್ಯೋತಿ ವಂದಿಸಿದರು. 75ಕ್ಕೂ ಹೆಚ್ಚು ವಿದ್ಯಾರ್ಥಿನಿಯರು, ಗ್ರಾಮೀಣ ಯುವಕರು ಹಾಗೂ ರೈತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

> ಕೃಷಿ ಉಪ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್. ಮಾತನಾಡಿ, ಪೌಷ್ಟಿಕ ಆಹಾರ ಸೇವನೆಯು ಉತ್ತಮ ಜೀವನಶೈಲಿ ಹಾಗೂ ಸ್ಫೂರ್ತಿದಾಯಕ ವ್ಯಕ್ತಿತ್ವವನ್ನು ಮೈಗೂಡಿಸಿಕೊಳ್ಳಲು ಸಹಕಾರಿಯಾಗುತ್ತದೆ. ನಿಯಮಿತ ವ್ಯಾಯಾಮ ಹಾಗೂ ಸಕಾರಾತ್ಮಕ ಮನೋಭಾವಗಳಿಂದ ಸಕ್ರಿಯ ಜೀವನ ನಡೆಸಬಹುದು ಎಂದು ನುಡಿದರು.

## ಸಂಪಾದಕೀಯ

# ಉಪಚುನಾವಣೆ ಜಪ

ಜಮ್ಮು ಕಾಶ್ಮೀರ ಮತ್ತು ಹರಿಯಾಣ ವಿಧಾನಸಭೆ ಚುನಾವಣೆ ಫಲಿತಾಂಶದ ನಂತರ ಸರ್ಕಾರ ರಚನೆಯ ಕಸರತ್ತು ಶುರುವಾಗಿದೆ. ಜಮ್ಮು ಕಾಶ್ಮೀರ ಮುಖ್ಯಮಂತ್ರಿ ಆಗಿ ಓಮರ್ ಅಬ್ದುಲ್ಲಾ ಒಬ್ಬರೇ ಪ್ರಮಾಣವಚನ ಸ್ವೀಕರಿಸಿದ್ದಾರೆ. ಇನ್ನು ಸಚಿವ ಸಂಪುಟ ವಿಸ್ತರಣೆ ವಿಷಯ ಚರ್ಚೆಗೆ ಬರಲಿದೆ. ಅದೇ ರೀತಿ ಹರಿಯಾಣದಲ್ಲಿ ಇನ್ನೂ ಸರ್ಕಾರ ರಚನೆಗೆ ಹಗ್ಗ ಜಗ್ಗಾಟ ನಡೆಯುತ್ತಿದೆ.

ಎರಡು ರಾಜ್ಯಗಳ ವಿಧಾನಸಭೆ ಚುನಾವಣೆ ಫಲಿತಾಂಶ ಹೊರ ಬಿದ್ದ ಕೆಲವೇ ದಿನಗಳಲ್ಲಿ ಮಹಾರಾಷ್ಟ್ರ ಮತ್ತು ಜಾರ್ಖಂಡ್ ರಾಜ್ಯದ ಚುನಾವಣೆ ಘೋಷಣೆಯಾಗಿದೆ. ಅದರ ಜೊತೆಗೆ ಕರ್ನಾಟಕದ ಮೂರು ಕ್ಷೇತ್ರಗಳ ಉಪಚುನಾವಣೆಗೂ ದಿನಾಂಕ ನಿಗದಿಯಾಗಿದೆ.

ಎಚ್ ಡಿ ಕುಮಾರಸ್ವಾಮಿ ರಾಜೀನಾಮೆಯಿಂದ ತೆರವಾದ ಚನ್ನಪಟ್ಟಣ, ಸಂಡೂರು ಹಾಗೂ ಶಿಗ್ಗಾಂವಿ ವಿಧಾನಸಭೆ ಕ್ಷೇತ್ರಗಳಿಗೆ ಈಗ ಉಪಚುನಾವಣೆ ಕಾಲ. ಸಹಜವಾಗಿ ರಾಜ್ಯದಲ್ಲಿ ಈಗ ಮತ್ತೊಮ್ಮೆ ಚುನಾವಣೆ ಕಾವು ಏರತೊಡಗಿದೆ. ಅದರಲ್ಲೂ ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆ ರಾಜ್ಯ ರಾಜಕಾರಣದಲ್ಲಿ ಸಂಚಲನ ಸೃಷ್ಟಿಗೆ ಕಾರಣವಾಗಿದೆ.

ಹೀಗೆ ದೇಶದಲ್ಲಿ ಒಂದಿಲ್ಲೊಂದು ಕಡೆ ಚುನಾವಣೆ ನಡೆಯುವುದರಿಂದ ಜನರ ಗಮನ ಕೇವಲ ಚುನಾವಣೆ ರಾಜ-ಕಾರಣ ಕೇಂದ್ರಿತವಾಗಿಯೇ ಇರುತ್ತದೆ. ಆ ಕಾರಣಕ್ಕಾಗಿಯೇ ಒಂದು ದೇಶ ಒಂದು ಚುನಾವಣೆ ಅಗತ್ಯವಾಗಿದೆ. ಒಂದೇ ಬಾರಿ ಚುನಾವಣೆ ನಡೆಯುವುದರಿಂದ ಜನರ ಪಾಲ್ಗೊಳ್ಳುವಿಕೆ ಹೆಚ್ಚಾಗುತ್ತದೆ. ಪ್ರಜಾತಂತ್ರ ಬಲಗೊಳ್ಳುತ್ತದೆ.

ವಿಷಯ ಏನೇ ಇರಲಿ. ಚನ್ನಪಟ್ಟಣ ವಿಧಾನಸಭೆ ಕ್ಷೇತ್ರ ಈಗ ಭಾರೀ ಚರ್ಚೆಯಲ್ಲಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ತಾವೇ ಅಭ್ಯರ್ಥಿ ಎನ್ನುವ ಮೂಲಕ ಚನ್ನಪಟ್ಟಣದ ಮೇಲೆ ಹಿಡಿತ ಸಾಧಿಸಲು ಹವಣಿಸುತ್ತಿದ್ದಾರೆ. ಇನ್ನು ಕುಮಾರಸ್ವಾಮಿ ಸಹ, ತಾವು ಪ್ರತಿನಿಧಿಸಿದ ಕ್ಷೇತ್ರವನ್ನು ಮತ್ತೆ ಪಡೆದುಕೊಳ್ಳಬೇಕು ಎನ್ನುವ ಲೆಕ್ಕಾಚಾರ, ಹೇಗಾದರೂ ಮಾಡಿ ಅಧಿಕಾರ ಹಿಡಿಯಬೇಕು ಎಂದು ಸಿ.ಪಿ. ಯೋಗೇಶ್ವರ ಹವಣಿಕೆ. ಇವೆಲ್ಲವನ್ನು ನೋಡಿ, ಕೇಳಿ, ತಿಳಿದುಕೊಳ್ಳುವುದರಲ್ಲಿನ ಜನರ ಉತ್ಸಾಹವೇ ಈ ಉಪಚುನಾವಣೆ.

# ಬ್ರಾಂಡ್ ಬೆಂಗಳೂರು ಹೋಗಿ ಬ್ಯಾಂಡ್ ಬೆಂಗಳೂರು ಆಗಿದೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬ್ರಾಂಡ್ ಬೆಂಗಳೂರು ಹೋಗಿ ಬ್ಯಾಂಡ್ ಬೆಂಗಳೂರು ಆಗಿದೆ ಎಂದು ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಬ್ರಾಂಡ್ ಬೆಂಗಳೂರು ಬಗ್ಗೆ ಹೇಳಿ ಬಿಡುಗಡೆ ಮಾಡಿದ್ದ ಹಣ ವಾಪಸ್ ಪಡೆದಿದ್ದಾರೆ. ತಕ್ಷಣ ಹಣ ಬಿಡುಗಡೆ ಮಾಡಬೇಕು. ಜೊತೆಗೆ ಮಳೆ ಸಮಸ್ಯೆ ಪರಿಹಾರ ಮಾಡಬೇಕು.

'ನಾವು ಯಾವತ್ತಿಗೂ ಬ್ರಾಂಡ್ ಬೆಂಗಳೂರು ಅಂತಾ ಹೇಳಿಲ್ಲ. ನಾವು ಕೆಂಪೇಗೌಡರ ಬೆಂಗಳೂರು ಹೆಸರಲ್ಲಿ ಅಭಿವೃದ್ಧಿ ಮಾಡಿದ್ದೇವೆ. ಬ್ರಾಂಡ್ ಬೆಂಗಳೂರು ಹೋಗಿ ಬ್ಯಾಂಡ್ ಬೆಂಗಳೂರು ಆಗಿದೆ.

### ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಗ್ರಾಮೀಣ ಮಹಿಳೆಯರ ದಿನಾಚರಣೆ

# ಮಹಿಳೆಯರು ಉದ್ಯಮಶೀಲತೆ ಬೆಳೆಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ವಿಜಯಪುರ

ಆಹಾರ ಸರಪಳಿಯಲ್ಲಿ ಮತ್ತು ಆಹಾರ ಭದ್ರತೆಯನ್ನು ಒದಗಿಸುವಲ್ಲಿ ಮಹಿಳೆಯರ ಕೊಡುಗೆ ಗಣನೀಯವಾಗಿದೆ. ಕೃಷಿ ಕೈಂಕರ್ಯ ಮಹಿಳಾ ಪ್ರಧಾನವಾಗಿದೆ. ಆದರೆ ಕೃಷಿಯ ಮೇಲಿನ ಅಧಿಕಾರ ಮಾತ್ರ ಪುರುಷರ ಪ್ರಾಬಲ್ಯದಲ್ಲಿದೆ. ಇದನ್ನು ಮೀರಿ ಮಹಿಳೆಯರು ಕೃಷಿ ಉದ್ಯಮಶೀಲತೆ ಬೆಳೆಸಿಕೊಳ್ಳಬೇಕು ಎಂದು ಮಹಿಳಾ ವಿವಿಯ ಕುಲಪತಿ ಪ್ರೊ. ಬಿ.ಕೆ. ತುಳಸಿಮಾಲ ಅಭಿಪ್ರಾಯಪಟ್ಟರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಮಹಿಳಾ ಅಧ್ಯಯನ ಕೇಂದ್ರದ ವತಿಯಿಂದ ಆಯೋಜಿಸಿದ್ದ ಅಂತಾರಾಷ್ಟ್ರೀಯ ಗ್ರಾಮೀಣ ಮಹಿಳೆಯರ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಮಹಿಳೆಯರು ಉದ್ಯಮಶೀಲತೆ ಬೆಳೆಸಿಕೊಳ್ಳಲು ಮತ್ತು ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕೆ ವಿಶ್ವವಿದ್ಯಾಲಯಗಳು ಆದ್ಯತೆ ನೀಡಬೇಕು. ಗ್ರಾಮೀಣ ಪ್ರದೇಶದ ಮಹಿಳೆಯರು ಕೃಷಿಯಲ್ಲಿ ಹೆಚ್ಚು ತೊಡಗಿಸಿಕೊಂಡಿದ್ದಾರೆ.



ಪ್ರತಿಯೊಂದು ಕೃಷಿ ಸಂಬಂಧಿತ ಚಟುವಟಿಕೆಯ ಹಿಂದೆ ಮಹಿಳೆಯ ಕೊಡುಗೆ ಅಪಾರವಾಗಿದೆ. ಆದ್ದರಿಂದ, ವಿಶ್ವಸಂಸ್ಥೆ ಗ್ರಾಮೀಣ ಮಹಿಳೆಯರ ದಿನಾಚರಣೆಯ ಅಂಗವಾಗಿ ಗ್ರಾಮೀಣ ಮಹಿಳೆಯರು ಎಲ್ಲರಿಗಾಗಿ ಉತ್ತಮ ಆಹಾರವನ್ನು ಬೆಳೆಯುತ್ತಿದ್ದಾರೆ ಎಂಬುದನ್ನು ಈ ವರ್ಷದ ಧ್ಯೇಯ ವಾಕ್ಯವನ್ನಾಗಿಸಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಉಮಾಶ್ರೀ ಶಂಕರ ಕೋಳಿ ಮಾತನಾಡಿ, ಸರ್ಕಾರ ಕಾರ್ಮಿಕರಿಗೆ ಹಲವು ಯೋಜನೆಗಳನ್ನು ರೂಪಿಸಿದ್ದು, ಅವುಗಳ ಪ್ರಯೋಜನವನ್ನು ಮಹಿಳೆಯರು ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾಮೀಣ ಪ್ರದೇಶದ ಮಹಿಳಾ ಸಾಧಕಿಯರಾದ ಸುನಂದಾ ಪಾಟೀಲ, ಸುಮನ ಕೋಲ್ಹಾರ, ಮಂಗಲಾ ಗುಡಿಮಠ, ಚಂದ್ರವ್ವ ಬಬಲೇಶ್ವರ, ಯಲ್ಲವ್ವಾ ಸಾಲಗಲ್ಲ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಮಾತನಾಡಿ, ಗ್ರಾಮೀಣ ಪ್ರದೇಶ ಮಹಿಳೆಯರ ಹತ್ತಿರ ನೇರವಾಗಿ ಕೃಷಿ ಮತ್ತು ಕೃಷಿಯೇತರ ಉತ್ಪನ್ನಗಳನ್ನು ಖರೀದಿಸುವ ಮೂಲಕ ಗ್ರಾಮೀಣ ಪ್ರದೇಶದ ಮಹಿಳೆಯರ ಸಬಲೀಕರಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಿ ಪ್ರೋತ್ಸಾಹಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ವಿವಿಯ ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್.ಎಂ. ಚಂದ್ರಶೇಖರ, ಪ್ರೊ. ಜಿ.ಬಿ. ಸೋನಾರ, ಡಾ. ಸೋನ ಕಾಂಬಳೆ, ಡಾ. ಕಲಾವತಿ ಕಾಂಬಳೆ ಉಪಸ್ಥಿತರಿದ್ದರು.ಮಹಿಳಾ ಅಧ್ಯಯನ ಕೇಂದ್ರದ ನಿರ್ದೇಶಕಿ ಪ್ರೊ. ಲಕಕ್ಷ್ಮೀದೇವಿ ವಾಯ್ ಪ್ರಾಸ್ತಾವಿಕ ನುಡಿಗಳನ್ನಾಡಿ ಸ್ವಾಗತಿಸಿದರು. ಡಾ. ಸರೋಜಾ ಸಂತಿ ಅತಿಥಿಗಳನ್ನು ಮತ್ತು ಸಾಧಕಿಯರನ್ನು ಪರಿಚಯಿಸಿದರು. ಡಾ. ರಜಿಯಾಬೇಗಂ ನದಾಫ್ ನಿರೂಪಿಸಿದರು. ರುಕ್ಮವ್ವಾ ಅಗಸರ ವಂದಿಸಿದರು.

# ತಿಮ್ಮಾಪೂರಕ್ಕೆ ಬಸವರಾಜ ರಾಯರೆಡ್ಡಿ ಭೇಟಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಸಮೀಪದ ತಿಮ್ಮಾಪೂರ ಗ್ರಾಮಕ್ಕೆ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯರ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿಯವರು ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗ್ರಾಮ ಘಟಕದ ವತಿಯಿಂದ ತಿಮ್ಮಾಪೂರ ಗ್ರಾಮಕ್ಕೆ ಹೊಂದಿಕೊಂಡಿರುವ ರಸ್ತೆಗಳಾದ ಯರೆಹಂಚಿನಾಳ, ಸೋಂಪೂರ, ಹಳ್ಳಿಗುಡಿ, ಹರ್ಲಾಪೂರ ರಸ್ತೆಗಳನ್ನು ಡಾಂಬರೀಕರಣ ಮಾಡಬೇಕು ಎಂದು ಮನವಿ ಪತ್ರವನ್ನು ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿ ಮಾತನಾಡಿದ ಶಾಸಕರು,



ಈಗಾಗಲೇ ಯೆರೆಹಂಚಿನಾಳ ಗ್ರಾಮದಿಂದ ಹಳ್ಳಿಗುಡಿ ರಾಷ್ಟ್ರೀಯ ಹೆದ್ದಾರಿಯವರೆಗೆ 5 ಕೋಟಿ ರೂ ವೆಚ್ಚದಲ್ಲಿ ರಸ್ತೆ ಡಾಂಬರೀಕರಣ ಕಾಮಗಾರಿಗೆ ಕ್ರಿಯಾಯೋಜನೆ ಸಿದ್ಧವಾಗಿದೆ. ಶೀಘ್ರ ಕಾಮಗಾರಿ ಪ್ರಾರಂಭವಾಗುತ್ತದೆ ಹಾಗೂ ತಿಮ್ಮಾಪೂರ ಗ್ರಾಮಕ್ಕೆ 90 ಲಕ್ಷ ರೂ ವೆಚ್ಚದ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಅನುದಾನ ಲಭ್ಯವಿದ್ದು, ಅದಕ್ಕೆ ಸೂಕ್ತ ಜಾಗವಿದ್ದರೆ ನಿಮ್ಮ ಗ್ರಾಮದಲ್ಲಿ ನಿರ್ಮಾಣ ಮಾಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ, ವೀರನಗೌಡ ಕುದುರಿಮೋತಿ, ಹನುಮಪ್ಪ ಯತ್ನಟ್ಟಿ, ಕುಮಾರ ಜೋಗಿನ, ಬಾಳಪ್ಪ ಗಂಗರಾತ್ರಿ, ಶರಣಪ್ಪ ಜೋಗಿನ, ರಾಮಣ್ಣ ಖಂಡ್ರೆ ಇ ಮುಂತಾದವರು ಉಪಸ್ಥಿತರಿದ್ದರು.

### ಗೃಹ ಮಂಡಳಿ ಅಧ್ಯಕ್ಷ ಶಿವಲಿಂಗೇಗೌಡ ಭರವಸೆ

# ಪತ್ರಕರ್ತರಿಗೆ ರಿಯಾಯಿತಿ ದರದಲ್ಲಿ ನಿವೇಶನ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಮಾಧ್ಯಮದವರಿಗೂ ಆದ್ಯತೆ ಮೇರೆಗೆ ರಿಯಾಯಿತಿ ದರದಲ್ಲಿ ನಿವೇಶನ ಮತ್ತು ಮನೆ ದೊರಕಿಸಿಕೊಡುವ ಪ್ರಯತ್ನ ಮಾಡುವುದಾಗಿ ಗೃಹ ಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ ಅವರು ಭರವಸೆ ನೀಡಿದ್ದಾರೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ನೇತೃತ್ವದಲ್ಲಿ ಗೃಹಮಂಡಳಿಯಲ್ಲಿ ಭೇಟಿ ಮಾಡಿ, ಸಲ್ಲಿಸಿದ ಮನವಿ ಸ್ವೀಕರಿಸಿದ ಸಂದರ್ಭದಲ್ಲಿ ಅವರು ಈ ಭರವಸೆ ನೀಡಿದ್ದಾರೆ.

ಗೃಹ ಮಂಡಳಿಯಲ್ಲಿ ನಾನಾ ಕಾರಣಗಳಿಗಾಗಿ ಹಂಚಿಕೆಯಾಗದೆ ಉಳಿದಿರುವ ನಿವೇಶನಗಳೇ ಬಹಳಷ್ಟಿವೆ. ಅವುಗಳನ್ನು ಜಿಲ್ಲಾವಾರು ಪಟ್ಟಿ ಮಾಡಿ ನಿವೇಶನ ರಹಿತರಾದ ಪತ್ರಕರ್ತರಿಗೆ ಮರು ಹಂಚಿಕೆ ಮಾಡುವ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ. ಈ ಬಗ್ಗೆ ಮುಖ್ಯಮಂತ್ರಿಗಳ ಜೊತೆಗೂ ಚರ್ಚೆ ಮಾಡಿ ಸೂಕ್ತ ತೀರ್ಮಾನ ತೆಗೆದುಕೊಳ್ಳುವುದಾಗಿ ತಿಳಿಸಿದರು.

ಗೃಹಮಂಡಳಿ ವತಿಯಿಂದ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಅಭಿವೃದ್ಧಿಪಡಿಸುವ ಬಡಾವಣೆಯಲ್ಲಿ ನಿವೇಶನಕ್ಕಾಗಿ ಅರ್ಜಿ ಸಲ್ಲಿಸುವ ಪತ್ರಕರ್ತರು, ಛಾಯಾಚಿತ್ರಗ್ರಾಹಕರು, ಕ್ಯಾಮರಾಮೆನ್‌ಗಳು ಸೇರಿದಂತೆ ಸುದ್ದಿಮನೆಯಲ್ಲಿ ನಾನಾ ಹಂತದಲ್ಲಿ ಕೆಲಸ ಮಾಡುವವರನ್ನು ಪ್ರತ್ಯೇಕವಾಗಿ ಪರಿಗಣಿಸಿ ಆದ್ಯತೆ ಮೇರೆಗೆ ನಿವೇಶನ ಹಂಚಿಕೆ ಮಾಡಬೇಕು ಎಂದು ಮನವಿ ಮಾಡಲಾಯಿತು.

### ಸ್ವಂತ ಖರ್ಚಿನಲ್ಲಿ ರಸ್ತೆಗೆ ಮಣ್ಣು ಹಾಕಿ ದುರಸ್ತಿ ಮಾಡಿಕೊಂಡ ರೈತರು!

# ಮಾದರಿ ಕಾರ್ಯವೋ, ಆಡಳಿತದ ನಿರ್ಲಕ್ಷ್ಯವೋ?

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಗೊಜನೂರ ಗ್ರಾಮದ ರೈತರೆಲ್ಲರೂ ಸೇರಿ ಸ್ವಂತ ಹಣ ಖರ್ಚು ಮಾಡಿ ತಮ್ಮ ಜಮೀನುಗಳಿಗೆ ಸಂಪರ್ಕಿಸುವ ರಸ್ತೆಯನ್ನು ದುರಸ್ತಿ ಮಾಡಿಕೊಂಡಿದ್ದಾರೆ. ಇದು ಮಾದರಿ ಕಾರ್ಯ ಎನ್ನಬೇಕೋ ಅಥವಾ ಜನಪ್ರತಿನಿಧಿಗಳು, ಅಧಿಕಾರಿಗಳು ಮತ್ತು ಸರಕಾರದ ನಿರ್ಲಕ್ಷ್ಯವೆನ್ನಬೇಕೋ ಜನರೇ ಉತ್ತರಿಸಬೇಕಿದೆ.

ಗೊಜನೂರಿನಿಂದ ಯಳವತ್ತಿ ಸಂಪರ್ಕಿಸುವ ಮಾರ್ಗ ಸಂಪೂರ್ಣ ಹಾಳಾಗಿ ವರ್ಷದುದ್ದಕ್ಕೂ ರೈತರು ತಮ್ಮ ಜಮೀನುಗಳಿಗೆ ತೆರಳಲು ಪರದಾಡಿದ್ದಾರೆ. ಸಂಬಂಧಪಟ್ಟ ಯಾರೂ ಇವರ ಮನವಿಗೆ ಸ್ಪಂದಿಸಿಲ್ಲ. ಕೊನೆಗೆ ರೈತರೆಲ್ಲ ಸೇರಿ ತಮ್ಮದೇ ಟ್ರ್ಯಾಕ್ಟರ್‌ನಿಂದ 60 ಲೋಡ್ ಮಣ್ಣನ್ನು ರಸ್ತೆಗೆ ಹಾಕಿ ಜೆಸಿಬಿಯಿಂದ ರಸ್ತೆ ದುರಸ್ತಿ ಮಾಡಿಕೊಂಡು ಬೀಗಿದ್ದಾರೆ. ಈ ಕಾರ್ಯದಲ್ಲಿ ರೈತರಾದ ಮಾಂತೇಶ ಸೊರಟೂರ, ಸಂತೋಷ ಮಾಡಳ್ಳಿ,



ಶಂಭುಲಿಂಗಪ್ಪ ಸೊರಟೂರ, ಹೊಳಲಪ್ಪ ಕರೆಣ್ಣವರ, ನಿಂಗಪ್ಪ ಮೋಡಿ, ಪರಸಪ್ಪ ಜಾಲವಾಡಗಿ, ವಿರೇಶ ಸೊರಟೂರ, ಮೈಲಾರಪ್ಪ ಕಲ್ಲೂರ, ಗಂಗಾಧರ ಹಿರೇಮಠ ಸೇರಿ ಅನೇಕ ರೈತರು ಕಾರ್ಯನಿರ್ವಹಿಸಿದರು.

ರೈತ ಮುಖಂಡ ಚನ್ನಪ್ಪ ಷಣ್ಮುಕಿ ಈ ಕುರಿತು ಪ್ರತಿಕ್ರಿಯಿಸಿ, ತಾಲೂಕಿನ ಬಹುತೇಕ ರೈತ ಸಂಪರ್ಕ ರಸ್ತೆಗಳು ಹಾಳಾಗಿದ್ದು, ರೈತರು ಕೃಷಿ ಚಟುವಟಿಕೆಗಳಿಗೆ ಹರಸಾಹಸ ಪಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮಳೆಗಾಲದಲ್ಲಂತೂ ಅವರ ಗೋಳು ಹೇಳತೀರದಾಗಿದೆ. ರಸ್ತೆ ಸುಧಾರಣೆಗೆ ಕಂಡ ಕಂಡವರಲ್ಲಿ ಗೋಗರೆಯುತ್ತಾರೆ. ಆದರೆ ಇವರ ಗೋಳು-ಕಷ್ಟ ಕೇಳುವವರಿಲ್ಲದಂತಾಗಿದೆ. ರಸ್ತೆ ಸಮಸ್ಯೆಯಿಂದ ಅನೇಕ ರೈತರ ಜಮೀನುಗಳು ಬೀಳು ಬಿದ್ದಿವೆ.

ಹೇಗೋ ಕಷ್ಟಪಟ್ಟು ಜಮೀನು ಹದಗೊಳಿಸಿ ಬಿತ್ತನೆ ಮಾಡಿದರೆ ಬೆಳೆದ ಫಸಲು/ಮಹಸಿಲು ಮನೆಗೆ ತರಲಾಗದ ಪರಿಸ್ಥಿತಿ ಇದೆ. ಈ ಬಗ್ಗೆ ರೈತರು ಸಂಬಂಧಪಟ್ಟವರಿಗೆ ಕೊಟ್ಟ ಮನವಿಗಳು ಕಸದ ಬುಟ್ಟಿ ಸೇರಿವೆ. ಹೋರಾಟಗಳಿಗೆ ಕಿಮ್ಮತ್ತಿಲ್ಲದಂತಾಗಿದೆ. ಇದನ್ನರಿತ ನಮ್ಮೂರಿನ ರೈತರೆಲ್ಲರೂ ಸೇರಿ ಸ್ವಂತ ಖರ್ಚಿನಲ್ಲಿ ಟ್ರ್ಯಾಕ್ಟರ್‌ನಿಂದ ಮಣ್ಣು ಹಾಕಿ ಜಮೀನುಗಳಿಗೆ ಹೋಗಿ-ಬರಲು ಅನಕೂಲವಾಗುವಂತೆ ರಸ್ತೆ ದುರಸ್ತಿ ಮಾಡಿಕೊಂಡಿದ್ದೇವೆ ಎಂದು ಹೆಮ್ಮೆಯಿಂದ ಹೇಳಿದರು.




ಲಕ್ಷ್ಮೇಶ್ವರದ ಸಮುದಾಯ ಆರೋಗ್ಯ ಕೇಂದ್ರಕ್ಕೆ ರಾಜ್ಯ ಸರ್ಕಾರ ಒದಗಿಸಿರುವ ನೂತನ ಆಂಬ್ಯುಲನ್ಸ್‌ಗೆ ಶಾಸಕ ಡಾ.ಚಂದ್ರು ಲಮಾಣಿ ಮಂಗಳವಾರ ಚಾಲನೆ ನೀಡಿದರು. ಈ ವೇಳೆ ಟಿಹೆಚ್‌ಓ ಡಾ. ಸುಭಾಷ ದಾಯಗೊಂಡ, ಡಾ. ಶ್ರೀಕಾಂತ ಕಾಟೇವಾಲೆ, ಎಂ.ಆರ್. ಪಾಟೀಲ, ದುಂಡೇಶ ಕೊಟಗಿ, ನವೀನ ಬೆಳ್ಳಟ್ಟಿ, ಅನಿಲ ಮುಳಗುಂದ, ಶಿವಯೋಗಿ ಅಂಕಲಕೋಟಿ ಹಾಗೂ ಆಸ್ಪತ್ರೆಯ ಸಿಬ್ಬಂದಿಗಳಿದ್ದರು.

# ಸಂಭ್ರಮದ ಉರುಸು ಆಚರಣೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದಲ್ಲಿ ಕಳೆದ 2 ದಿನಗಳಿಂದ ನಡೆಯುತ್ತಿದ್ದ ಹಜರತ್ ಮೆಹಬೂಬ ಸುಬ್ಹಾನಿ ಉರುಸ್‌ಗೆ ಮಂಗಳವಾರ ನಡೆದ ತವಾಫ್‌ನಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಹಿಂದೂ-ಮುಸ್ಲಿಂ ಭಕ್ತರು ಸಂಭ್ರಮದ ಉರುಸ್ ಆಚರಣೆ ಮಾಡಿದರು.

ಪಟ್ಟಣವು ಭಾವೈಕ್ಯತೆಯ ಪ್ರತೀಕವಾಗಿದೆ. ನೆರೆಯ ರಾಜ್ಯ ಮತ್ತು ಜಿಲ್ಲೆಗಳಿಂದ ಸಹಸ್ರಾರು ಭಕ್ತರನ್ನು ಹೊಂದಿರುವ ಕರ್ತೃ ಶ್ರೀ ಜ.ಫಕೀರೇಶ್ವರರ ಮಹಾಸಂಸ್ಥಾನ ಮಠ ಹಾಗೂ ಹಜರತ್ ಮೆಹಬೂಬ ಸುಬ್ಹಾನಿ ದರ್ಗಾ ತನ್ನದೇ ಆದ ವೈಶಿಷ್ಟ್ಯತೆಯನ್ನು ಹೊಂದಿದೆ. ಹೀಗಾಗಿ, ಎರಡೂ ಧಾರ್ಮಿಕ ಸ್ಥಳಗಳಿಗೆ ಇಲ್ಲಿ ಹಿಂದೂ-ಮುಸ್ಲಿಂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವುದು ವಿಶೇಷ.



ಉರುಸ ಪ್ರಯುಕ್ತ ರವಿವಾರ ರಾತ್ರಿ ನಡೆದ ಗಂಧದ ಕಾರ್ಯಕ್ರಮದಲ್ಲಿಯೂ ಸಹ ಅಪಾರ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದರು. ಕೆಳಗೇರಿ ಓಣಿಯ ದರ್ಗಾದಿಂದ ಮೆರವಣಿಗೆಯು ಸೋಮವಾರ ಬೆಳಗಿನ ಜಾವ ಮೆಹಬೂಬಸುಬಾನಿ ದರ್ಗಾವರೆಗೆ ನಡೆಯಿತು. 2ನೇ ದಿನವಾದ ಸೋಮವಾರ ಉರುಸು ನಡೆಯಿತು, ಕೊನೆಯ ದಿನ ಮಂಗಳವಾರ ವಿಶೇಷವಾಗಿ ಹಿಂದೂ ಭಕ್ತರು ತಮ್ಮ ಮನೆಯಿಂದ ದರ್ಗಾದವರೆಗೂ ದೀಡ ನಮಸ್ಕಾರ ಹಾಕುವುದು, ಇನ್ನೂ ಕೆಲವರು ಸಂತಾನ ಪ್ರಾಪ್ತಿಗಾಗಿ ಹರಕೆಯನ್ನು ಹೊತ್ತಿದ್ದು, ತಮ್ಮ ಬೇಡಿಕೆ ಈಡೇರಿದ ಹಿನ್ನೆಲೆಯಲ್ಲಿ ತಮ್ಮ ಮಕ್ಕಳ ತೂಕದಷ್ಟು ಸಕ್ಕರೆ ಹಾಗೂ ಬೆಳ್ಳಿಯ ಕುದುರೆ ಅಥವಾ ಕಡಗಗಳನ್ನು ಕಾಣಿಕೆಯಾಗಿ ಸಮರ್ಪಿಸಿದರು.

# ಉತ್ತಮ ಭವಿಷ್ಯ ರೂಪಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪದವಿ ಹಂತದ ಎಲ್ಲಾ ವಿದ್ಯಾರ್ಥಿಗಳು ಸತತ ಪರಿಶ್ರಮ, ನಿಷ್ಠೆಯ ಕಲಿಕೆಯಿಂದ ಸಾಧನೆ ಮಾಡಿ, ಸಮಾಜದಲ್ಲಿ ಉನ್ನತ ಸ್ಥಾನಗಳನ್ನು ಅಲಂಕರಿಸಿ, ತಮ್ಮ ಅಮೂಲ್ಯವಾದ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಪ್ರಾಂಶುಪಾಲ ಎಸ್.ಎಲ್. ಗುಳೇದಗುಡ್ಡ ಹೇಳಿದರು.

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದಲ್ಲಿ ನಡೆದ ಪ್ರಸಕ್ತ ಶೈಕ್ಷಣಿಕ ವರ್ಷದ ಬಿಎ, ಬಿಕಾಂ, ಬಿಎಸ್‌ಸಿ, ಬಿಸಿಎ ಪದವಿಗಳ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳು ಸುಮ್ಮನೆ ಕೂರುವ ಕಾಲವಲ್ಲ. ಸ್ಪರ್ಧೆ ಇದ್ದಾಗ ಮಾತ್ರ ಏನಾದರೂ ಸಾಧಿಸಲು ಸಾಧ್ಯ. ಅದಕ್ಕಾಗಿ ಹೆಚ್ಚಿನ ನೈಪುಣ್ಯತೆ ಬೆಳೆಸಿಕೊಳ್ಳಿ. ವಿಶ್ವದಲ್ಲೇ ಭಾರತ



ಅತ್ಯಧಿಕ ಯುವ ಸಮೂಹವನ್ನು ಹೊಂದಿದ್ದು, ಅದು ಸಂಪನ್ಮೂಲವಾಗಿ ಹೊರಹೊಮ್ಮಲು ವಿದ್ಯಾರ್ಥಿ ಜೀವನದಲ್ಲಿ ಸರಿಯಾದ ಮಾರ್ಗದಲ್ಲಿ ಬೆಳೆಯಬೇಕು ಎಂದರು.

ಹಿರಿಯ ಪ್ರಾಧ್ಯಾಪಕ ಎಸ್.ಎಸ್. ಸೂಡಿ ಮಾತನಾಡಿ, ನಮ್ಮ ಸರ್ಕಾರಿ ಕಾಲೇಜಿನಲ್ಲಿ ಅಧ್ಯಯನ ಮಾಡಲು ಬಂದ ವಿದ್ಯಾರ್ಥಿಗಳು ಉತ್ತಮ ಜ್ಞಾನದ ಜೊತೆ ಕೌಶಲಾಭಿವೃದ್ಧಿಗೆ ಮುಂದಾಗಬೇಕು. ವಿವಿಧ ಕ್ಷೇತ್ರದಲ್ಲಿ ತಮ್ಮಲ್ಲಿರುವ ಪ್ರತಿಭೆ ಹೊರಬರಲು ಉಪನ್ಯಾಸಕರ ಮಾರ್ಗದರ್ಶನದಲ್ಲಿ ತಾವೇ ಅವಕಾಶಗಳನ್ನು ಹುಡುಕಿಕೊಳ್ಳಬೇಕು. ಹೀಗಾದಾಗ ಜೀವನದಲ್ಲಿ ಯಶಸ್ಸು ಕಾಣಲು ಸಾಧ್ಯ ಎಂದರು.

ಪ್ರಾಧ್ಯಾಪಕರಾದ ಜ್ಯೋತಿ ಬೋಳಣ್ಣವರ, ನಸರೀನ್ ಬಾನು ಜಮಾದರ, ಕೆ.ಆರ್. ಪಾಟೀಲ, ಅಂಜನಮೂರ್ತಿ, ಶಿವಮೂರ್ತಿ ಕರೇರ, ಅನಿಲಕುಮಾರ, ವಿ.ಸಿ.. ಇಲ್ಲೂರ, ಕೆ.ಎನ್. ಕಟ್ಟಿಮನಿ, ನಾಗರಾಜ ಹೊನ್ನೂರ, ಬಸವರಾಜ ಕಂಬಳಿ, ಚಂದ್ರು ಸಂಶಿ, ವಿ.ಕೆ. ಸಂಗನಾಳ, ಬಸವರಾಜ ಮಡಿವಾಳರ, ಕಿರಣ ರಂಜನಗಿ, ಶಂಕರ ನರಗುಂದ, ಕಿನ್ನಾಳ, ಪ್ರೇಮಾ ಕಾತ್ರಾಳ, ಶ್ವೇತಾ ಹುಣಸಿಮರದ, ಸಿದ್ದು ನವಲಗುಂದ ಇದ್ದರು.

**ಕೆವಿಕೆಯಲ್ಲಿ ಮಹಿಳಾ ಕಿಸಾನ್ ದಿನಾಚರಣೆ ಹಾಗೂ ರೈತರ-ವಿಜ್ಞಾನಿಗಳ ಚರ್ಚಾಗೋಷ್ಠಿ' ಕಾರ್ಯಕ್ರಮ**

# ಸಿರಿಧಾನ್ಯಗಳನ್ನು ನಿಯಮಿತವಾಗಿ ಬಳಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಕುಟುಂಬ ಮತ್ತು ಕೃಷಿಯಲ್ಲಿ ಮಹಿಳೆಯರ ಪಾತ್ರ ಅಗಾಧವಾಗಿದ್ದು, ನವೀನ ತಾಂತ್ರಿಕತೆಗಳನ್ನು, ಇಲಾಖೆಯಲ್ಲಿರುವ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ಆರ್ಥಿಕವಾಗಿ, ಸಾಮಾಜಿಕವಾಗಿ ಮುಂದುವರೆಯಬೇಕು. ಕುಟುಂಬದ ಆರೋಗ್ಯ ಮಹಿಳೆಯರ ಕೈಯಲ್ಲಿದೆ ಎಂದು ಕೃಷಿ ಉಪ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್ ಅಭಿಪ್ರಾಯಪಟ್ಟರು.

ಕೃಷಿ ಇಲಾಖೆಯ ಆತ್ಮ ಯೋಜನೆ ಗದಗ ಹಾಗೂ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಇವರ ಸಹಯೋಗದೊಂದಿಗೆ ಹುಲಕೋಟಿಯ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ 'ಮಹಿಳಾ ಕಿಸಾನ್ ದಿನಾಚರಣೆ ಹಾಗೂ ರೈತರ-ವಿಜ್ಞಾನಿಗಳ ಚರ್ಚಾಗೋಷ್ಠಿ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಇಂದಿನ ಜೀವನಶೈಲಿಯ ಕಾರಣದಿಂದ ಅನೇಕ ರೋಗಗಳು ಕಾಡುತ್ತಿದ್ದು, ಇದಕ್ಕೆ ಪರಿಹಾರವಾಗಿ ಸಿರಿಧಾನ್ಯಗಳನ್ನು ನಿಯಮಿತವಾಗಿ ಬಳಸಬೇಕು. ಸ್ವ-ಸಹಾಯ ಸಂಘಗಳ ಮೂಲಕ ಮಹಿಳೆಯರು ಆದಾಯ ತರುವ ಚಟುವಟಿಕೆಗಳನ್ನು ಮಾಡುತ್ತಾ ಆರ್ಥಿಕವಾಗಿ ಸಬಲರಾಗಬೇಕು, ಮಕ್ಕಳ ಶಿಕ್ಷಣ ಹಾಗೂ ತಮ್ಮ ಆರೋಗ್ಯದ ಬಗ್ಗೆ ಗಮನಹರಿಸಲು ಸಲಹೆ ನೀಡಿದರು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪ್ರಗತಿಪರ ರೈತ ಮಹಿಳೆ, ಅರಹುಣಸಿಯ ಶಿಲ್ಪಾ ಕುರಿ, ಸಾವಯವ ಕೃಷಿಗೆ ಒತ್ತು ಕೊಟ್ಟು, ಸರಕಾರದ ವಿವಿಧ ಯೋಜನೆಗಳನ್ನು ಮಹಿಳೆಯರು ಸದುಪಯೋಗಪಡಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕೆಂದು ತಿಳಿಸುತ್ತಾ, ಆರೋಗ್ಯ, ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲು ತಿಳಿಸಿದರು.

ಇನ್ನೋರ್ವ ಮುಖ್ಯ ಅತಿಥಿ ಪ್ರಗತಿಪರ ರೈತ ಮಹಿಳೆ ಅನಿತಾ ಶಿ.ಕುರ್ತಕೋಟಿ ಮಾತನಾಡಿ, ತಮ್ಮ ಕೃಷಿ ಜೀವನದ ಅನುಭವಗಳನ್ನು ಹಂಚಿಕೊಂಡರು.

ಅಧ್ಯಕ್ಷತೆ ವಹಿಸಿದ್ದ ಹಿರಿಯ ವಿಜ್ಞಾನಿಗಳು ಹಾಗೂ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಹುಲಕೋಟಿ ಮುಖ್ಯಸ್ಥರಾದ ಡಾ. ಸುಧಾ ವ್ಹಿ.ಮಂಕಣಿ ಮಾತನಾಡುತ್ತಾ, ಮಣ್ಣಿನ ಸಂರಕ್ಷಣೆಯನ್ನು ಕಾಪಾಡಿಕೊಳ್ಳಲು ಸಾವಯವ, ಜೈವಿಕ ಗೊಬ್ಬರಗಳನ್ನು ಕೃಷಿಯಲ್ಲಿ ಬಳಕೆ ಮಾಡಬೇಕು. ಭಾರತ ಹಳ್ಳಿಗಳ ನಾಡು. ಮಹಿಳೆಯು ಅಭಿವೃದ್ಧಿಯಾದರೆ ಕೃಷಿ ಅಭಿವೃದ್ಧಿಯಾದಂತೆ. ಕೃಷಿ ಅಭಿವೃದ್ಧಿಯಾದರೆ, ಹಳ್ಳಿಗಳು ಅಭಿವೃದ್ಧಿಯಾದಂತೆ. ಹಳ್ಳಿಗಳು ಅಭಿವೃದ್ಧಿಯಾದರೆ, ದೇಶ ಅಭಿವೃದ್ಧಿಯಾದಂತೆ. ಮಹಿಳೆಯರು ಸ್ವಾವಲಂಬಿಗಳಾಗಿ, ಕೃಷಿ ಸಂಸ್ಕರಣೆಗಳಂತಹ ಗುಡಿಕೈಗಾರಿಕೆಗಳನ್ನು ಮಾಡಿ, ಮೌಲ್ಯವರ್ಧನೆಗೆ ಒತ್ತು ನೀಡಿ, ಸಿರಿಧಾನ್ಯಗಳನ್ನು ಬೆಳೆಸಿ ಮತ್ತು ಬಳಸಲು ಕರೆ ನೀಡಿದರು. ನಂತರ, ತಾಂತ್ರಿಕ ಅಧಿವೇಶನಗಳಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಷಯ ತಜ್ಞರಾದ ಹೇಮಾವತಿ ಹಿರೇಗೌಡರ ಸಮಗ್ರ ಕೃಷಿ ಪದ್ಧತಿಯ ಬಗ್ಗೆ ಸವಿವರವಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ಹಾಗೂ ಸಮಗ್ರ ಬೇಸಾಯ ಪದ್ಧತಿಯನ್ನು ಅಳವಡಿಸಿ ಯಶಸ್ವಿಯಾದ ರೈತ ಮಹಿಳೆಯರನ್ನು ಸನ್ಮಾನಿಸಲಾಯಿತು.

> ಮಹಿಳೆಯರು ಕುಟುಂಬದ ಆರೋಗ್ಯದ ಜೊತೆಗೆ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಈ ಮೂಲಕ ಮಹಿಳೆಯರನ್ನು ಎಲ್ಲಾ ರಂಗದಲ್ಲಿ ಸಮಾಜದ ಮುಖ್ಯವಾಹಿನಿಗೆ ತರುವುದು ಇಂದಿನ ಅವಶ್ಯಕತೆಯಾಗಿದೆ. ಪ್ರತಿ ದಿನಾಚರಣೆಗೂ ತನ್ನದೇ ಆದ ವಿಶೇಷತೆ ಇರುವಂತೆ ರೈತ ಮಹಿಳಾ ದಿನಾಚರಣೆಗೂ ಪ್ರಾಮುಖ್ಯತೆಯಿದ್ದು, ಗ್ರಾಮೀಣ ಭಾಗದಲ್ಲಿ ಕೃಷಿ ಅಭಿವೃದ್ಧಿ ಮತ್ತು ಆಹಾರ ಭದ್ರತೆಯಲ್ಲಿ ಅವಳ ಪಾತ್ರ ಅತಿ ಪ್ರಮುಖವಾಗಿದೆ. ಕೃಷಿ ಎಂದ ಕೂಡಲೇ ಪುರುಷನಷ್ಟೇ ಅಲ್ಲ, ಮಹಿಳೆಯ ಸಾಧನೆ ಪುರುಷರಿಗಿಂತ ಕಡಿಮೆ ಏನೂ ಇಲ್ಲ ಎಂದು ಡಾ. ಸುಧಾ ವ್ಹಿ.ಮಂಕಣಿ ತಿಳಿಸಿದರು.

## ಗುರುವಂದನೆ, ಸ್ನೇಹ ಸಮ್ಮಿಲನ ಅ.20ಕ್ಕೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ 2000/21ನೇ ಸಾಲಿನ ವಿದ್ಯಾರ್ಥಿಗಳಿಂದ ಅ.20ರಂದು ಬೆಳಿಗ್ಗೆ 10.30 ಗಂಟೆಗೆ ಬಾಲಲೀಲಾ ಮಹಾಂತ ಶಿವಯೋಗಿಗಳ ಕಲಾಭವನದಲ್ಲಿ ಗುರುವಂದನಾ, ಸ್ನೇಹ ಸಮ್ಮಿಲನ, ಸನ್ಮಾನ ಹಾಗೂ ಅಗಲಿದ ಗುರುಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಧಾರವಾರ ಮುರುಘಾಮಠ ಹಾಗೂ ಮುಳಗುಂದ ಗವಿಮಠದ ಡಾ.ಮಲ್ಲಿಕಾರ್ಜುನ ಮಹಾಸ್ವಾಮೀಜಿ, ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಬಾಲಲೀಲಾ ಶಿಕ್ಷಣ ಸಮಿತಿ ಅಧ್ಯಕ್ಷ ಎಂ.ಡಿ. ಬಟ್ಟೂರ, ಉದ್ಘಾಟನೆಯನ್ನು ಗೌರವ್ವಾ ಬಡ್ನಿ ನೆರವೇರಿಸುವರು. ಬಿಇಓ ವಿ.ವಿ. ನಡುವಿನಮನಿ, ರಮೇಶ ಕಲ್ಲನಗೌಡರ, ಎ.ಎಂ. ಅಂಗಡಿ, ಇ.ಎಂ. ಗುಳೆದಗುಡ್ಡ, ಡಾ. ಎಸ್.ಸಿ. ಚವಡಿ, ವಿ.ಎಸ್. ನೀಲಗುಂದ, ಬಿ.ಸಿ. ಬಡ್ನಿ, ಎನ್.ಆರ್. ದೇಶಪಾಂಡೆ, ಕೆ.ಎಲ್. ಕರಿಗೌಡರ, ಎಂ.ಎಂ. ಬಡ್ನಿ, ಪಿ.ಎ. ವಂಟಕರ್, ಎಂ.ಎಂ. ಅದರಗುಂಚಿ, ಎಫ್.ಎಸ್. ಅವೋಘಿಮಠ, ಎಸ್.ಸಿ. ಕುರ್ತಕೋಟಿ, ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಗುರುಗಳು, ಗುರುಮಾತೆಯರು ಹಾಗೂ 2000/21ನೇ ಸಾಲಿನ ವಿದ್ಯಾರ್ಥಿಗಳು ಭಾಗವಹಿಸುವರು ಎಂದು ಪ್ರಕಟಣೆಗೆ ತಿಳಿಸಿದೆ.

# ಬೇಡಿಕೆ ಈಡೇರಿಕೆಗೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಉಡುಪಿಯಲ್ಲಿ ಜರುಗಿದ **Construction Workers Federation** ಠಜಿ ಖಟಜಿಚ (ಅಘಊಖ) ತಿಂಗಳ ಸಂಘಟನೆಯ 70ನೇ ಅಖಿಲ ಭಾರತ ಕಾರ್ಯಕಾರಿ ಸಮಿತಿ ಸಭೆಯು ದೇಶದ ಕಟ್ಟಡ ನಿರ್ಮಾಣ ವಲಯ ಹಾಗೂ ಅಲ್ಲಿ ಕೆಲಸ ಮಾಡುತ್ತಿರುವ ಕೋಟ್ಯಾಂತರ ಕಾರ್ಮಿಕರ ಪರಿಸ್ಥಿತಿ ಕುರಿತು ಅವಲೋಕನ ನಡೆಸಿತು.




ಸಭೆಯಲ್ಲಿ ಕಾರ್ಮಿಕರ ಮುಖಂಡರಾದ ಮಾರುತಿ ಚಿಟಗಿ ಮಾತನಾಡಿ, ದೇಶದ ನಿರ್ಮಾಣ ವಲಯದ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುರುವ ವಲಸೆ ಕಾರ್ಮಿಕರ ಬದುಕು ಅಸಹನೀಯವಾಗಿದೆ. ವಲಸೆ ಕಾರ್ಮಿಕರನ್ನು ಅಕ್ಷರಶಃ ಒತ್ತೆಯಾಳುಗಳನ್ನಾಗಿ ಮಾಡಿಕೊಂಡು ಸಾಮಾಜಿಕ ಭದ್ರತೆಗಳಿಂದಲೂ ವಂಚಿತರನ್ನಾಗಿಸಲಾಗಿದೆ. ಶೇ 30ರಷ್ಟು ಮಹಿಳೆಯರು ನಿರ್ಮಾಣ ವಲಯದಲ್ಲಿ ದುಡಿಮೆ ಮಾಡುತ್ತಿದ್ದರೂ ಅವರಿಗೆ ನೀಡಬೇಕಾದ ಕುಶಲ ತರಬೇತಿ ಹಾಗೂ ಕನಿಷ್ಠ ಸಮಾನ ಕೆಲಸಕ್ಕೆ ಸಮಾನ ವೇತನ ಸೌಲಭ್ಯಗಳಿಂದಲೂ ವಂಚಿಸಲಾಗುತ್ತಿದೆ ಎಂದರು.

ರಾಜ್ಯದ ಕಟ್ಟಡ ನಿರ್ಮಾಣ ಕಾರ್ಮಿಕರ ಬೇಡಿಕೆಗಳಾದ ಶೈಕ್ಷಣಿಕ ಸಹಾಯಧನ ಕಡಿತ ಮಾಡಿರುವ ಆದೇಶ ವಾಪಸ್ ಪಡೆಯಬೇಕು, ಹೈಕೋರ್ಟ ಆದೇಶದಂತೆ 2021ರ ಅಧಿಸೂಚನೆ ಅನ್ವಯಿಸಿ ಶೈಕ್ಷಣಿಕ ಧನ ಸಹಾಯ ಬಿಡುಗಡೆ ಮಾಡಬೇಕು, ನೈಜ ಕಾರ್ಮಿಕರ ನೋಂದಣಿ ಮತ್ತು ಮರು ನೋಂದಣಿ ಅರ್ಜಿಗಳನ್ನು ಸಕಾರಣವಿಲ್ಲದೇ ತಿರಸ್ಕರಿಸುವುದು ನಿಲ್ಲಬೇಕು, ಸೌಲಭ್ಯಗಳಿಗಾಗಿ ಸಲ್ಲಿಸಿರುವ ಸಾವಿರಾರು ಅರ್ಜಿಗಳಗಳನ್ನು ಶೀಘ್ರವೇ ವಿಲೇವಾರಿ ಮಾಡಬೇಕು, ಪಿಂಚಣಿದಾರರಿಗೆ ಶೀಘ್ರವೇ ಅವರ ಪಿಂಚಣಿ ಹಣವನ್ನು ಬಿಡುಗಡೆ ಮಾಡಬೇಕು ಇವೇ ಮುಂತಾದ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದರು.

ಈ ಎಲ್ಲ ಬೇಡಿಕೆಗಳೊಂದಿಗೆ ಪ್ರತಿಭಟನೆ ನಡೆಸಿ ಗದಗ ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಿ ನರೇಂದ್ರ ಮೋದಿಯವರಿಗೆ ಹಾಗೂ ಕರ್ನಾಟಕ ಸರ್ಕಾರದ ಕಾರ್ಮಿಕ ಸಚಿವರಾದ ಸಂತೋಷ ಲಾಡ್‌ರವರಿಗೆ ಗದಗ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಮೂಲಕ ಮನವಿ ಸಲಿಸಿದರು.

ಈ ಸಂದರ್ಭದಲ್ಲಿ ಕಾರ್ಮಿಕ ಸಂಘಟನೆಗಳು ಮುಖಂಡರು, ಕಟ್ಟಡ ನಿರ್ಮಾಣ ಕಾರ್ಮಿಕರು ಉಪಸ್ಥಿತರಿದ್ದರು.



ಗದುಗಿನ ಅಮರೇಶ್ವರ ನಗರದ ಶ್ರೀ ಬನ್ನಿಮಹಾಂಕಾಳಿ ದೇವಸ್ಥಾನದ ಕಳಸಾರೋಹಣ ಕಾರ್ಯಕ್ರಮವು ಇಮಾಮಸಾಬ ಮೊರಬದ ಮತ್ತು ಓಣಿಯ ಗುರುಹಿರಿಯರಿಂದ ಜರುಗಿತು. ಈ ಕಾರ್ಯಕ್ರಮದಲ್ಲಿ ಹನುಮಸಾಗರ ಜಂಗಮನಿ, ಯಚ್ಚಲಗಾರ ಸಿ.ಗೊಲ್ಲರ, ಎಚ್.ಎನ್. ದಳವಾಯಿ, ಸಂಗನಾಳ ವಕೀಲರು, ಭಿಕ್ಷಾವತಿಮಠ, ಡಿ.ಎಸ್. ದುರಗಣ್ಣವರ ಮತ್ತು ಕಮಿಟಿಯ ಪದಾಧಿಕಾರಿಗಳು ಹಾಗೂ ಗುರು-ಹಿರಿಯರು ಉಪಸ್ಥಿತರಿದ್ದರು.

**ಕಪ್ಪತ್ತಗಿರಿ ಫೌಂಡೇಶನ್‌ನಿಂದ ದಸರಾ ಕವಿಗೋಷ್ಠಿ, ವಿಶೇಷ ಸನ್ಮಾನ ಕಾರ್ಯಕ್ರಮ**

# ಫೌಂಡೇಶನ್‌ನ ಸಮಾಜಸೇವೆ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಕಪ್ಪತ್ತಗಿರಿ ಫೌಂಡೇಷನ್ ವತಿಯಿಂದ ವಿಭಿನ್ನವಾದ ಕಾರ್ಯಕ್ರಮಗಳನ್ನು ಮಾಡುವ ಮೂಲಕ ಜಿಲ್ಲೆಯಲ್ಲಿ ಹಲವು ವೇದಿಕೆಗಳಿಗೆ ಮಾದರಿಯಾಗಿದ್ದಾರೆ. ವೇದಿಕೆಯ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಲಾ ಎಂ.ಇಟಗಿಮಠ ಅವರಲ್ಲಿರುವ ಸಮಾಜಸೇವಾ ಮನೋಭಾವನೆಯನ್ನು ನಾವೆಲ್ಲರೂ ಮೆಚ್ಚಿಕೊಳ್ಳಲೇಬೇಕು. ಕುಟುಂಬದ ಜವಾಬ್ದಾರಿಯ ನಡುವೆಯೂ ಸಂಘಟನೆಯಲ್ಲಿ ತೊಡಗಿಸಿಕೊಳ್ಳುವ ರೀತಿ ಶ್ಲಾಘನೀಯ ಎಂದು ರೋಟರಿ ಕ್ಲಬ್ ಗದಗ ಜಿಲ್ಲೆಯ ಗವರ್ನರ್ ವಿ.ಕೆ. ಗುರುಮಠ ಮೆಚ್ಚುಗೆ ವ್ಯಕ್ತಪಡಿಸಿದರು. ಕಪ್ಪತ್ತಗಿರಿ ಫೌಂಡೇಷನ್, ಸಾಹಿತ್ಯ ಸಾಂಸ್ಕೃತಿಕ ಕಲಾ ವೇದಿಕೆಯಿಂದ ದಸರಾ ಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ಕವಿಗೋಷ್ಠಿ, ವಿಶೇಷ ಸನ್ಮಾನ ಕಾರ್ಯಕ್ರಮವನ್ನು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಓಂಕಾರೇಶ್ವರ ಹಿರೇಮಠದ ಷ.ಬ್ರ.ಶ್ರೀ.ಫಕ್ಕಿರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಕಪ್ಪತ್ತಗಿರಿ ಫೌಂಡೇಶನ್ ಸಮಾಜ ಸೇವೆಗಾಗಿ ತನ್ನ ಕೆಲಸವನ್ನು ಮುಂದುವರೆಸಿದೆ. ತಾವೆಲ್ಲರೂ ಅವರೊಂದಿಗೆ ಕೈ ಜೋಡಿಸಿ. ನಮ್ಮ ನಾಡು, ನುಡಿ, ಕನ್ನಡದ ಸೇವೆಯನ್ನು ಮಾಡಿ ನಮ್ಮ ಕರ್ನಾಟಕದಲ್ಲಿ ಕಪ್ಪತ್ತಗಿರಿ ಫೌಂಡೇಶನ್ ತನ್ನ ಛಾಪನ್ನು ಮೂಡಿಸಿದೆ. ಸಂಘಟನೆಯ ವ್ಯಾಪ್ತಿ ವಿಸ್ತಾರವಾಗಿ ಹಬ್ಬಲಿ ಎಂದು ಆಶೀರ್ವದಿಸಿದರು.

ವಕೀಲರಾದ ಎಮ್.ಎಮ್. ಹಿರೇಮಠ, ಈರಪ್ಪ ಮಾದರ, ಕೆ.ಎಸ್. ಬಾರಕೇರ, ರಾಜೇಶ್ವರಿ ಬಡ್ನಿ, ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ಕಲಾಶ್ರೀ ಹಾದಿಮನಿ, ಸನ್ಮಾನ ಸ್ವೀಕರಿಸಿದ ಡಾ. ಬಿ.ಎಸ್. ರಾಠೋಡ, ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಲಾ ಇಟಗಿಮಠ ಮಾತನಾಡಿದರು. ಮರುಳು ಸಿದ್ದಪ್ಪ ದೊಡ್ಡಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗದಗ ಜಿಲ್ಲೆಯಿಂದ ರಾಜ್ಯಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಾದ ಭವಾನಿ ಪ್ರಹ್ಲಾದ್ ಹೊಸಳ್ಳಿ, ಅಭಿಷೇಕ ಮಲ್ಲಪ್ಪ ತಳವಾರರನ್ನು ಸನ್ಮಾನಿಸಲಾಯಿತು. ಸೌಮ್ಯ ಹಿರೇಮಠ ಪ್ರಾರ್ಥಿಸಿದರು. ತೆ-ಊಟಯ್ಯ ಗುಡ್ಡಿಮಠ ಸ್ವಾಗತಿಸಿದರು. ಮಹೇಶ ಕುಂದ್ರಾಳ ಹಿರೇಮಠ ಸಂಗೀತದೊಂದಿಗೆ ಸರ್ವರೂ ಭಾಗಿಯಾಗಿ ನಾಡಗೀತೆಯನ್ನು ಹಾಡಿದರು. ಎಸ್.ಕೆ. ಆಡಿನ ಕಾರ್ಯಕ್ರಮ ನಿರೂಪಿಸಿದರು. ಮಹಾಂತೇಶ ಬೇರಗಣ್ಣವರ ವಂದಿಸಿದರು.

> ಮುಖ್ಯ ಅತಿಥಿಗಳಾದ ಶರದರಾವ್ ಹುಯಿಲಗೋಳ ಮಾತನಾಡಿ, ಚಂದ್ರಕಲಾ ಇಟಗಿಮಠ ಅವರು ಸಮಾಜಕ್ಕೆ ಸಾಹಿತ್ಯ ಮತ್ತು ಸಾಂಸ್ಕೃತಿಕವಾಗಿ ವಿಶೇಷ ಕೊಡುಗೆ ಕೊಡಬೇಕೆನ್ನುವ ಆಶಯಯೊಂದಿಗೆ ಕಪ್ಪತ್ತಗಿರಿ ಫೌಂಡೇಷನ್ ಹುಟ್ಟುಹಾಕಿ, ಹತ್ತುಹಲವಾರು ಕಾರ್ಯಕ್ರಮಗಳನ್ನು ಸಂಘಟಿಸುವ ಮೂಲಕ ಸಾಧಕರನ್ನು ಗುರುತಿಸಿ-ಗೌರವಿಸುವ ಕಾಯಕ ಮಾಡುತ್ತಿದ್ದಾರೆ. ಇಂತಹ ಒಳ್ಳೆಯ ಕಾರ್ಯಕ್ಕೆ ನಾವೆಲ್ಲಾ ಸದಾ ಬೆಂಬಲಿಸುತ್ತೇವೆ ಎಂದರು.

**ಪರಿಶಿಷ್ಟ ಜಾತಿ ಒಳಮೀಸಲಾತಿ ಹೋರಾಟ ಸಮಿತಿ ವತಿಯಿಂದ ಮನವಿ**

# ಒಳಮೀಸಲಾತಿ ಜಾರಿಗೊಳಿಸಲು ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ವೋಚ್ಚ ನ್ಯಾಯಾಲಯದ ಏಳು ನ್ಯಾಯಮೂರ್ತಿಗಳ ಪೂರ್ಣ ಪೀಠವು ಎಸ್.ಸಿ-ಎಸ್.ಟಿ. ಮೀಸಲಾತಿಯಲ್ಲಿ ಒಳಮೀಸಲಾತಿ ನೀಡುವುದು ರಾಜ್ಯ ಸರಕಾರಕ್ಕೆ ಹಕ್ಕಿದೆ ಎಂದು ತೀರ್ಪು ನೀಡಿದೆ. ಈ ತೀರ್ಪಿನಂತೆ ಒಳಮೀಸಲಾತಿ ಜಾರಿಗೊಳಿಸಬೇಕೆಂದು ಪರಿಶಿಷ್ಟ ಜಾತಿ ಒಳಮೀಸಲಾತಿ ಹೋರಾಟ ಸಮಿತಿ ಗದಗ ವತಿಯಿಂದ ನಗರದ ಕಿತ್ತೂರ ಚನ್ನಮ್ಮ ವೃತ್ತದಿಂದ ಗದಗ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಪಾದಯಾತ್ರೆಯ ಮೂಲಕ ತೆರಳಿ, ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.



ಒಳ ಮೀಸಲಾತಿ ಹೋರಾಟ ಸಮಿತಿಯ ಸದಸ್ಯರಾದ ಮೋಹನ ಆಲಮೇಲಕರ ಮಾತನಾಡಿ, ಕರ್ನಾಟಕದಲ್ಲಿ ಮೂರು ದಶಕಗಳ ನಿರಂತ ಹೋರಾಟದ ಬಗ್ಗೆ ಪ್ರಸ್ತುತ ಸಕಾರವು ಕೇವಲ ಸಹಾನುಭೂತಿ ತೋರಿಸುತ್ತದೆಯಾದರೂ, ಇದು ಕ್ರಿಯಾತ್ಮಕ ರೂಪ ಪಡೆಯದಿದ್ದರೆ ಅಪ್ರಯೋಜಕವಾಗುತ್ತದೆ.

ಪರಿಶಿಷ್ಟ ಜಾತಿಗಳಲ್ಲಿ ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಅತಿ ಹಿಂದುಳಿದಿರುವ ಜಾತಿಗಳ ಅಭಿವೃದ್ಧಿಯ ಕಲ್ಯಾಣದ ಸದುದ್ದೇಶದಿಂದ ಆಯಾ ಜಾತಿಗಳಿಗೆ ಸೇರಿದವರಿಗೆ ಮೀಸಲಾತಿ ಸೌಲಭ್ಯ ತಲುಪಲು ಒಳಮೀಸಲಾತಿ ನೀಡುವ ಸಾಂವಿಧಾನಿಕ ಅಧಿಕಾರವು ಆಯಾ ರಾಜ್ಯಗಳಿಗಿದೆ ಎಂದು ಸರ್ವೋಚ್ಚ ನ್ಯಾಯಾಲಯದ ಪೀಠವು ಅಭಿಪ್ರಾಯಪಟ್ಟಿದೆ.

ಸಾಂವಿಧಾನಿಕ ಹಕ್ಕು ಸೌಲಭ್ಯಗಳನ್ನು ಮರೆಮಾಚಲು ಒಳಮೀಸಲಾತಿ ಜಾರಿಗೊಳಿಸುವ ಕಾನೂನಾತ್ಮಕ ಸನ್ನಿವೇಶಗಳಿಂದ ತಪ್ಪಿಸಿಕೊಳ್ಳಲು ಸದ್ಯ ಜಾತಿ ಜನಗಣತಿ ವರದಿ ಬಿಡುಗಡೆ ಚರ್ಚೆ ಮುನ್ನೆಲೆಗೆ ತಂದು ಸುಪ್ರೀಂ ಕೋರ್ಟ್ ತೀರ್ಪಿನ ವಿರುದ್ಧದ ಗೊಂದಲ ಸೃಷ್ಟಿಸುತ್ತಿರುವದು ಸಂವಿಧಾನಕ್ಕೆ ಅಪಚಾರ. ಈ ಜಾತಿ ಜನಗಣತಿ ವರದಿಗೂ ಎಸ್.ಸಿ ಒಳಮೀಸಲಾತಿ ವರ್ಗಿಕರಣಕ್ಕೂ ಯಾವುದೇ ರೀತಿಯ ಸಂಬಂಧವಿಲ್ಲ ಎಂದರು.


ಈ ಸಂದರ್ಭದಲ್ಲಿ ಡಿ.ಎಸ್. ಎಸ್. ರಾಜ್ಯ ಮುಖಂಡರಾದ ಎಸ್.ಎನ್. ಬಳ್ಳಾರಿ, ಎಚ್.ಡಿ. ಪೂಜಾರ, ಸತೀಶ ಪಾಶಿ, ವಸಂತ ಜೋಗಣ್ಣವರ, ಅಶೋಕ ಕುಡತಿನ್ನಿ, ಚಂದ್ರಶೇಖರ ಹರಿಜನ, ಮೈಲಾರಪ್ಪ ಚಳ್ಳಮರದ, ಮಾರ್ತಂಡಪ್ಪ ಹಾದಿಮನಿ, ಲಕ್ಷ್ಮಣ ತಗಡಿನಮನಿ, ಮರಿಯಪ್ಪ ಸಿದ್ದಣ್ಣನವರ, ನಿಂಗಪ್ಪ ದೊಡ್ಡಮನಿ, ಮಲ್ಲಿಕ್ ಸಂಗಾಪೂರ, ವಿನಾಯಕ ಬಳ್ಳಾರಿ, ಕೃಷ್ಣಪ್ಪ ಪೂಜಾರ, ಬಸವರಾಜ ಮುಳ್ಳಾಳ ಮುಂತಾದವರು ಉಪಸ್ಥಿತರಿದ್ದರು.

# ಮುಕ್ತಿಮಂದಿರದಲ್ಲಿ ಲಿಂ.ವೀರ ಗಂಗಾಧರ ಜಗದ್ಗುರುಗಳ 42ನೇ ಪುಣ್ಯಾರಾಧನಾ ಮಹೋತ್ಸವ ಅ.19ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದ ಸಂಸ್ಥಾಪಕರು, ಬಾಳೇಹೊನ್ನೂರು ಶ್ರೀ ರಂಭಾಪುರಿ ಪೀಠದ ಲಿಂ.ರಂ.ಜ. ಪ್ರಸನ್ನ ರೇಣುಕ ವೀರಗಂಗಾಧರ ಶಿವಾಚಾರ್ಯ ಸ್ವಾಮೀಜಿಯವರ 42ನೇ ಪುಣ್ಯಾರಾಧನಾ ಮಹೋತ್ಸವ ಅ.19ರಂದು ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಜರುಗಲಿದೆ.

ಈ ಕುರಿತು ಬುಧವಾರ ಕ್ಷೇತ್ರದ ಪಟ್ಟಾಧ್ಯಕ್ಷರು ಹಾಗೂ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಮಾಹಿತಿ ನೀಡಿ, ಲಿಂ.ರಂ.ವೀರಗಂಗಾಧರ ಜಗದ್ಗುರುಗಳ ತಪೋಭೂಮಿ ಮುಕ್ತಿಮಂದಿರ ಧರ್ಮಕ್ಷೇತ್ರ ಈ ಭಾಗದ ಭೂಕೈಲಾಸ ಎಂದೇ ಪ್ರಸಿದ್ಧವಾಗಿದೆ. ಬಾಳೆಹೊನ್ನೂರು ರಂಭಾಪುರಿ ಪೀಠದ ಪೀಠಾಧ್ಯಕ್ಷರಾಗಿ ನಾಡಿನಾದ್ಯಂತ ಧರ್ಮ ಪ್ರಸಾರ ಮಾಡಿದ್ದಾರೆ. ಅವರ 'ಮಾನವ ಧರ್ಮಕ್ಕೆ ಜಯವಾಗಲಿ-ಧರ್ಮದಿಂದಲೇ ವಿಶ್ವಕ್ಕೆ ಶಾಂತಿ' ಎಂಬ ವಿಶ್ವಶಾಂತಿ ಮಂತ್ರ ಮೊಳಗಿಸಿದ ವಿಶ್ವ ಕಲ್ಯಾಣ ಯೋಗೀಶ್ವರರ 42ನೇ ಪುಣ್ಯಾರಾಧನೆಯು ಬಾಳೆಹೊನ್ನೂರು ರಂಭಾಪುರಿ ವೀರಸಿಂಹಾಸನಾಧೀಶ್ವರ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ಜರುಗಲಿದೆ.



ಅ.19ರಂದು ಪ್ರಾತಃಕಾಲ ಪಂಚಾಚಾರ್ಯ ಧ್ವಜಾರೋಹಣ, ಪೂಜಾ ಕೈಂಕರ್ಯದೊಂದಿಗೆ ಪುಣ್ಯಾರಾಧನೆ ಕಾರ್ಯಕ್ರಮಗಳು ಆರಂಭಗೊಳ್ಳುವವು. ಇದೇ ಸಂದರ್ಭದಲ್ಲಿ ಕಲಾದಗಿ ಪಂಚಗ್ರಹ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರ 9ನೇ ವರ್ಷದ ಪುಣ್ಯಸ್ಮರಣೋತ್ಸವ ನಡೆಯುವುದು. ಮಧ್ಯಾಹ್ನ 1ಕ್ಕೆ ಲಿಂ.ರಂ.ಜ. ವೀರಗಂಗಾಧರ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಮತ್ತು ಸಂಜೆ 4ಕ್ಕೆ ಧರ್ಮಸಭೆ ಜರುಗಲಿದೆ. ನೊಣವಿನಕೆರೆ ಕಾಡಸಿದ್ಧೇಶ್ವರಮಠದ ಕರಿವೃಷಭ ದೇಶೀಕೇಂದ್ರ ಶಿವಯೋಗೀಶ್ವರ ಶಿವಾಚಾರ್ಯರು ಅಧ್ಯಕ್ಷತೆ ವಹಿಸುವರು. ಬಳ್ಳಾರಿ ಜಿಲ್ಲೆ ಕುರಗೋಡಿನ ನಿವಾಸಿ ಡಾ.ಶಿವರುದ್ರಗೌಡ್ರು ನಾಡಗೌಡ್ರು ಅವರಿಗೆ ರಂಭಾಪುರಿ ಜಗದ್ಗುರು ವೀರಗಂಗಾಧರ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಕಾರ್ಯಕ್ರಮಕ್ಕೆ ನಾಡಿನ ಅನೇಕ ಮಠಗಳ ಮಠಾಧೀಶರು, ಹರಗುರು ಚರಮೂರ್ತಿಗಳು, ಕೇಂದ್ರ ಗಣಿ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ, ಸಚಿವ ಎಚ್.ಕೆ. ಪಾಟೀಲ, ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಡಾ. ಚಂದ್ರು ಲಮಾಣಿ, ಎಂ.ಆರ್. ಪಾಟೀಲ, ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ಎಸ್.ಐ. ಚಿಕ್ಕನಗೌಡ್ರ, ಕುಸುಮಾವತಿ ಶಿವಳ್ಳಿ ಸೇರಿದಂತೆ ಅನೇಕ ರಾಜಕೀಯ ಮುಖಂಡರು ಆಗಮಿಸುವರು ಎಂದು ತಿಳಿಸಿದರು.

# ಮಳೆಯ ಅಬ್ಬರಕ್ಕೆ ಬೆಳೆಗಳು ಜಲಾವೃತ: ನದಿಯಂತಾದ ನೂರಾರು ಎಕರೆ ಜಮೀನು..!

■ವಿಜಯಸಾಕ್ಷಿ ಸುದ್ದಿ, ರೋಣ

ಕಳೆದ ಒಂದು ವಾರದಿಂದ ಬಿಟ್ಟು ಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಮಲಪ್ರಭಾ ನದಿ, ಬೆಣ್ಣಿಹಳ್ಳದ ಅಬ್ಬರಕ್ಕೆ ಬೆಳೆಗಳು ಜಲಾವೃತಗೊಂಡಿದೆ. ಮಲಪ್ರಭಾ ನದಿ, ಬೆಣ್ಣಿಹಳ್ಳದ ಪ್ರವಾಹಕ್ಕೆ ರೈತರು ಕಂಗಾಲಾಗಿದ್ದು,

ರೋಣ ತಾಲೂಕಿನ ಯಾ.ಸ. ಹಡಗಲಿ, ಹೊಳೆಆಲೂರ, ಮೆಣಸಗಿ, ಕುರುವಿನಕೊಪ್ಪ ಸೇರಿದಂತೆ ಹಲವು ಗ್ರಾಮಗಳ ಜಮೀನುಗಳಿಗೆ ಅಪಾರ ನದಿ ನೀರು ನುಗ್ಗಿ ಗೋವಿನ ಜೋಳ, ಹತ್ತಿ, ಕಬ್ಬು ಸೇರಿದಂತೆ ಹಲವು ಬೆಳೆಗಳು ನೀರುಪಾಲಾಗಿದೆ.



ಬಂಗಾರದಂಥ ಬೆಳೆಗಳು ನೀರು ಪಾಲಾಗಿದ್ದು ನೋಡಿ ರೈತರು ಕಂಗಾಲಾಗಿದ್ದು, ಮತ್ತೆ ಅನ್ನದಾತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಎಡಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತವಾಗಿದ್ದು, ಸರ್ಕಾರ, ಅಧಿಕಾರಿಗಲು ರೈತರ ನೆರವಿಗೆ ಬರಲು ಒತ್ತಾಯ ಮಾಡಿದ್ದಾರೆ.

## CPY ವರ್ಸಸ್ HDK ಒಳಜಗಳ ನಮಗೆ ಅನುಕೂಲವಾಗಿದೆ: ಶಾಸಕ ಪ್ರದೀಪ್ ಈಶ್ವರ್



■ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ

CPY ವರ್ಸಸ್ HDK ಒಳಜಗಳ ನಮಗೆ ಅನುಕೂಲವಾಗಿದೆ ಎಂದು ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಹೇಳಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ನನಗೂ ಚನ್ನಪಟ್ಟಣ ಉಪಚುನಾವಣೆ ಉಸ್ತುವಾರಿ ಕೊಟ್ಟಿದ್ದಾರೆ. ಯಾರೇ ನಮ್ಮ ಪಕ್ಷದ ಅಭ್ಯರ್ಥಿಯಾಗಲಿ ಗೆಲ್ಲುವುದು ನಿಶ್ಚಿತ ಎಂದರು.

ಈ ಬಾರಿ ಚನ್ನಪಟ್ಟಣ ಉಪಚುನಾವಣೆಯಲ್ಲಿ ಅಭ್ಯರ್ಥಿ ಆಯ್ಕೆ ವಿಚಾರವಾಗಿ ಜೆಡಿಎಸ್ ಬಿಜೆಪಿ ನಡುವೆ ಒಳಜಗಳ ತಾರಕಕ್ಕೇರಿದೆ. ಇದು ನಮಗೆ ಅನುಕೂಲ ಆಗಲಿದೆ.

ಒಂದು ಕಡೆ ಸಿಪಿ ಯೋಗೇಶ್ವರ್ ತಾನು ಸ್ಪರ್ಧಿಸುವುದಾಗಿ ಹೇಳಿದ್ದಾರೆ. ಇನ್ನೊಂದೆಡೆ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆಗೆ ಕುಮಾರಸ್ವಾಮಿ ಪಟ್ಟು ಹಿಡಿದಿದ್ದಾರೆ ಒಂದು ವೇಳೆ ನಿಖಿಲ್ ಕುಮಾರಸ್ವಾಮಿ ಸ್ಪರ್ಧಿಸಿದರೆ ಸಿಪಿ ಯೋಗೇಶ್ವರ್ ಬೆಂಬಲಿಗರ ಮತಗಳು ನಮಗೆ ಬರುವ ಸಾಧ್ಯತೆಯಿದೆ. ಹೀಗಾಗಿ ಸಿಪಿವೈ ವರ್ಸಸ್ ಹೆಚ್‌ಡಿಕೆ ಒಳಜಗಳ ನಮಗೆ ಅನುಕೂಲವಾಗಿದೆ ಎಂದರು.

### 'ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ' ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ಒತ್ತಡವಿಲ್ಲದವರೇ ಪುಣ್ಯವಂತರು

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಿಗೆ ಪೋಷಕರಿಂದ ವಿದ್ಯಾಭ್ಯಾಸಕ್ಕೆ ಸಂಬಂಧಿಸಿದ ಒತ್ತಡ ಹೆಚ್ಚಿರುತ್ತದೆ. ಆ ಒತ್ತಡವನ್ನು ಧನಾತ್ಮಕವಾಗಿ ತೆಗೆದುಕೊಂಡು ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ವಿಯಾಗಿ ಒಳ್ಳೆಯ ವ್ಯಕ್ತಿತ್ವ ನಿರ್ಮಿಸಿಕೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ನಗರದ ಆರ್‌ಡಿಪಿಆರ್ ವಿದ್ಯಾಲಯದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಕ್ರಮ ವಿಭಾಗ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೃಷಿ ಇಲಾಖೆ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಅಬಕಾರಿ ಇಲಾಖೆ, ಜಿಲ್ಲಾ ಕಾರಾಗೃಹ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್, ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಹಾಗೂ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಲಯ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ 'ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಈ ಹಿಂದೆ ಸುಮಾರು 10 ವರ್ಷದ ಮುಂಚೆ ಮನೋವೈದ್ಯರ ಬಗ್ಗೆ ಜನರಲ್ಲಿ ಬೇರೆ ಭಾವನೆ ಇತ್ತು. ಇವತ್ತಿನ ದಿನದಲ್ಲಿ ಮನೋವೈದ್ಯರ ಪ್ರಾಮುಖ್ಯತೆ ಹೆಚ್ಚಾಗಿದೆ. ಇಂದಿನ ದಿನಮಾನದಲ್ಲಿ ಪ್ರತಿಯೊಬ್ಬರೂ ಹಲವಾರು ಒತ್ತಡಗಳಿಂದ ಬಳಲುತ್ತಿದ್ದಾರೆ. ಒತ್ತಡವಿಲ್ಲದವರೇ ಪುಣ್ಯವಂತರು. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳಲ್ಲಿ ಹೆಚ್ಚು ಆತ್ಮಹತ್ಯೆ ಪ್ರಕರಣಗಳು ಕಂಡುಬರುತ್ತಿರುವ ಕಾರಣ ಪ್ರತಿ ಶಾಲಾ-ಕಾಲೇಜುಗಳಲ್ಲಿ ಆಪ್ತ ಸಮಾಲೋಚನಾ ಕೇಂದ್ರಗಳನ್ನು ತೆರೆದು ಸೇವೆ ನೀಡಬೇಕು ಹಾಗೂ ವಿದ್ಯಾರ್ಥಿಗಳು ಆಪ್ತಸಮಾಲೋಚನೆ ಕೇಂದ್ರಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿ, ಎಲ್ಲರೂ ಮಾನಸಿಕವಾಗಿ ಸದೃಡರಾಗಿ ಜೀವನದಲ್ಲಿ ಯಶಸ್ವಿಯಾಗಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಮ್ಸ್‌ನ ಮನೋವೈದ್ಯ ಡಾ. ಫಕೀರಪ್ಪ ಗಾಣಿಗೇರ ಉಪನ್ಯಾಸ ನೀಡಿ, ಮಾನಸಿಕ ಖಾಯಿಲೆಗಳು ಬರಲು ಕಾರಣ, ಗುರುತಿಸುವುದು ಹೇಗೆ ಹಾಗೂ ಮಾನಸಿಕವಾಗಿ ಸಧೃಡರಾಗಲು ಬೇಕಾಗುವ ಕೌಶಲ್ಯಗಳ ಕುರಿತು ಸವಿವರವಾಗಿ ತಿಳಿಸಿದರು.

ಆರ್‌ಡಿಪಿಆರ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸುರೇಶ ವಿ.ನಾಡಗೌಡರ ಮಾತನಾಡಿ, ದೈಹಿಕ ಆರೋಗ್ಯಕ್ಕೆ ಮಾನಸಿಕ ಆರೋಗ್ಯ ಅತ್ಯವಶ್ಯಕವಾಗಿದೆ. ಪ್ರತಿಯೊಬ್ಬರೂ ಮಾನಸಿಕವಾಗಿ ಸದೃಢರಾಗಿ, ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ ಸಾಬ ಬಬರ್ಜಿ, ನಾಗಾವಿ ಗ್ರಾಮ ಪಂಚಾಯತ್ ಅಧ್ಯಕ್ಷ ಸುರೇಶ ಪೋಮಪ್ಪ ಪವಾರ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಅನುಷ್ಠಾನ ಅಧಿಕಾರಿ ಡಾ. ರಾಜೇಂದ್ರ ಸಿ.ಬಸರಿಗಿಡದ, ತಾಲೂಕಾ ಆರೋಗ್ಯ ಅಧಿಕಾರಿ ಡಾ. ಪ್ರೀತ ಖೋನಾ, ಡಾ. ವರ್ಷಾ ಅಂಗಡಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಎಮ್.ಎಚ್. ಕಂಬಳಿ (ಡಿ.ವಾಯ್.ಪಿ.ಸಿ.) ಹಾಗೂ ಸಿಬ್ಬಂದಿಗಳಾದ ಗೀತಾ ಕಾಂಬಳೆ, ಪುಷ್ಪಾ ಪಾಟೀಲ, ಶ್ರೀಧರ ಎಮ್.ಸಿ., ವಿನಾಯಕ ಕಾಳಿ, ವಿನಾಯಕ ವಾಗಮೋರೆ, ಶೋಭಾ ವಡ್ಡರ, ನೂತನ ಹೊಸಮನಿ, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಲಯದ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ ಸ್ವಾಗತಿಸಿದರು, ಉಪನ್ಯಾಸಕಿ ನಾಗರತ್ನ ನಾಯ್ಕ ನಿರೂಪಿಸಿದರು. ಪ್ರಾರ್ಥನೆಯನ್ನು ವಿದ್ಯಾರ್ಥಿನಿಯರಾದ ಕಾವ್ಯಾ ಮತ್ತು ದೀಪಾ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಎಸ್. ಎಸ್. ನೀಲಗುಂದ ರವರು ಪ್ರಾಸ್ತಾವಿಕವಾಗಿ ಮಾತನಾಡಿ, ದೇಶದ ಬೆಳವಣಿಗೆಗೆ ಮಾನಸಿಕ ಆರೋಗ್ಯ ಬಹಳ ಮುಖ್ಯ. ವಿದ್ಯಾರ್ಥಿಗಳು ಭಾವನೆಗಳನ್ನು ಸಮರ್ಪಕವಾಗಿ ನಿರ್ವಹಿಸಿದರೆ ಉತ್ತಮ ವ್ಯಕ್ತಿತ್ವ ಹೊಂದಿ ಅತ್ಯುತ್ತಮವಾದ ಜೀವನ ನಡೆಸಬಹುದು. ವಿದ್ಯಾರ್ಥಿಗಳು ಮಾನಸಿಕ ಆರೋಗ್ಯದ ಕುರಿತು ಸಮಾಜದಲ್ಲಿ ಅರಿವು ಮೂಡಿಸಿ ಎಂದು ತಿಳಿಸಿದರು.

# ಮಾದಿಗ ಸಮಾಜದ ಹೋರಾಟಕ್ಕೆ ನ್ಯಾಯ ದೊರಕಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ಒಳಮೀಸಲಾತಿಯನ್ನು ತಕ್ಷಣವೇ ಜಾರಿಗೆ ತಂದು ಮಾದಿಗ ಸಮಾಜಕ್ಕೆ ನ್ಯಾಯ ಕೊಡಿಸಬೇಕೆಂದು ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ಅಧ್ಯಕ್ಷ ರಾಘವೇಂದ್ರ ಪರಸಪ್ಪ ಪರಾಪೂರ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ರಾಘವೇಂದ್ರ ಪರಸಪ್ಪ ಪರಾಪೂರ, ಪರಿಶಿಷ್ಟ ಜಾತಿಗಳಲ್ಲಿ ಮಾದಿಗ ಸಮುದಾಯವು ಇಡೀ ದಕ್ಷಿಣ ಭಾರತದಲ್ಲಿ ಮಾದಿಗ ಸಮುದಾಯವು ಅತ್ಯಂತ ಶೋಷಿತ ಸಮಾಜವಾಗಿದ್ದು, ಶೈಕ್ಷಣಿಕ, ಸಾಮಾಜಿಕ, ಆರ್ಥಿಕ, ಔದ್ಯೋಗಿಕ ಮತ್ತು ರಾಜಕೀಯ ವಲಯದಲ್ಲಿ ಹಿಂದುಳಿದಿದೆ. ಈ ಎಲ್ಲಾ ಕ್ಷೇತ್ರಗಳಲ್ಲಿ ಸಮಾನತೆ ಸಾಧಿಸಲು ಮಾದಿಗ ಸಮುದಾಯ ಕಳೆದ ಆರು ದಶಕಗಳಿಂದ ಹೋರಾಟ ನಡೆಸಿದೆ.

ಆದರೆ ಇಲ್ಲಿಯವರೆಗೆ ಒಳಮೀಸಲಾತಿ ಅನುಷ್ಠಾನಕ್ಕೆ ಸರಕಾರ ಮುಂದಾಗದೇ ಇರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ರಾಜ್ಯ ಸರ್ಕಾರ ಕೂಡಲೇ ಒಳಮೀಸಲಾತಿಯನ್ನು ಜಾರಿಗೆ ತಂದು ಕಳೆದ 6 ದಶಕಗಳ ಹೋರಾಟಕ್ಕೆ ನ್ಯಾಯ ದೊರಕಿಸಿಕೊಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಅಶೋಕ ಹಾದಿಮನಿ, ಮುಖಂಡರಾದ ಪಂಪಾಪತಿ ಅಗಸಿನಕೊಪ್ಪ, ವಿರೂಪಾಕ್ಷಪ್ಪ ಗೌಡರ, ಮಂಜುನಾಥ ತೌಜಲ್, ರಮೇಶ ರಾಲದೊಡ್ಡಿ, ಸುಂಕಣ್ಣ ಗುತ್ತಿ, ಮರಿಯಪ್ಪ ಪರಾಪೂರ, ಪರಶುರಾಮ ಸಂಗಾಪೂರ, ಸದಾಶಿವ ಕೊಟ್ನಿಕಲ್, ಗೋಪಾಲ ಕೋಣಿಮನಿ, ಗೋವಿಂದ ಗುತ್ತಿ, ಮಂಜುನಾಥ ಪರಾಪೂರ, ವಿಕ್ರಮ ಮಾದರ, ವಿನಾಯಕ ಹೊಸಳ್ಳಿ, ವಿಶಾಲ ಹಾದಿಮನಿ ಮುಂತಾದವರಿದ್ದರು.

# ಪಾದಯಾತ್ರೆಯಿಂದ ಸದ್ಗುಣಗಳ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಮಂತ್ರಾಲಯ ಪಾದಯಾತ್ರಾ ಸಂಘದ ವತಿಯಿಂದ ಶ್ರೀ ಕ್ಷೇತ್ರ ಮಂತ್ರಾಲಯಕ್ಕೆ 66ನೇ ವರ್ಷದ ಪಾದಯಾತ್ರೆಯು ಯಾತ್ರೆಯ ರೂವಾರಿ ದಿ.ವೈದ್ಯ ಬಾಬುರಾವ್ ಕುಲಕರ್ಣಿ ಅವರ ನಿವಾಸದಿಂದ ಬುಧವಾರ ರಾಯರ ಸ್ಮರಣೆಯೊಂದಿಗೆ ಪ್ರಾರಂಭವಾಯಿತು.



ಪಾದಯಾತ್ರೆ ಆರಂಭಕ್ಕೂ ಮುನ್ನ ದಿ.ವೈದ್ಯ ಬಾಬುರಾವ್ ಕುಲಕರ್ಣಿ ಅವರ ನಿವಾಸದಲ್ಲಿ ಲೋಕಕಲ್ಯಾಣಾರ್ಥವಾಗಿ ಹಾಗೂ ಪಾದಯಾತ್ರೆಯ ಯಶಸ್ಸಿಗಾಗಿ ಪ್ರಾಣೇಶಾಚಾರ್ಯ ಅವಧಾನಿ ಅವರ ನೇತೃತ್ವದಲ್ಲಿ ಹೋಮವನ್ನು ನೆರವೇರಿಸಲಾಯಿತು.

ಪಾದಯಾತ್ರೆಯು ಸೋಮೇಶ್ವರನ ದರ್ಶನ ಪಡೆದು ಪಾಟೀಲ ಕುಲಕರ್ಣಿ ಅವರ ನಿವಾಸದಲ್ಲಿ ಸಭೆಯಾಗಿ ಮಾರ್ಪಟ್ಟಿತು. ಈ ವೇಳೆ ಸಂಘದ ಹಿರಿಯರಾದ ಕೆ.ಆರ್. ದೇಶಪಾಂಡೆ ಮಾತನಾಡಿ, ಧಾರ್ಮಿಕ ಕ್ಷೇತ್ರದ ಪಾದಯಾತ್ರೆ ಮನಸ್ಸಿನಲ್ಲಿರುವ ದುರ್ಗುಣಗಳನ್ನು ನಾಶ ಮಾಡಿ ಸದ್ಗುಣಗಳ ಪ್ರಾಪ್ತಿಗೆ ಮುಕ್ತಿ ಮಾರ್ಗ ತೋರುವುದಾಗಿದೆ. ದಿ.ವೈದ್ಯ ಬಾಬುರಾವ್ ಕುಲಕರ್ಣಿ ಮತ್ತು ದಿ.ಶ್ರೀನಿವಾಸ ಕುಲಕರ್ಣಿ ಸಂಘಟನೆ ಮತ್ತು ಅನೇಕ ಸಾತ್ವಿಕ ಶಕ್ತಿಗಳು ಈ ಪಾದಯಾತ್ರೆಗೆ ದಾರಿದೀಪವಾಗಿರಲಿವೆ. ಪಾದಯಾತ್ರೆಯಲ್ಲಿ ನಿತ್ಯವೂ ಹೋಮ-ಹವನ, ಹರಿನಾಮಸ್ಮರಣೆ ನಡೆಸಲಾಗುವದರಿಂದ ಸಮಸ್ತ ಮಾನವ ಕುಲಕ್ಕೆ ಒಳ್ಳೆಯದಾಗಬೇಕೆಂಬ ಸಂಕಲ್ಪವನ್ನು ಹೊಂದಿದ್ದೇವೆ. ಅ.27ರಂದು ಪಾದಯಾತ್ರೆಯು ಶ್ರೀಕ್ಷೇತ್ರ ಮಂತ್ರಾಲಯವನ್ನು ತಲುಪಲಿದೆ ಎಂದು ನುಡಿದರು.

ಈ ವೇಳೆ ಪಲ್ಲಣ್ಣ ಕುಲಕರ್ಣಿ, ಕೃಷ್ಣ ಕುಲಕರ್ಣಿ(ತಂಗೋಡ), ಡಾ.ಶ್ರೀಹರಿ ಕುಲಕರ್ಣಿ, ಆರ್.ಎ. ಕುಲಕರ್ಣಿ, ಗೋಪಾಲ ಪಡ್ನೀಸ್, ಅನಿಲ ಕುಲಕರ್ಣಿ, ಗುರುರಾಜ ಕುಲಕರ್ಣಿ, ವಿ.ಎಲ್. ಪೂಜಾರ, ಲಕ್ಷ್ಮೀಕಾಂತ ಗಣಾಚಾರ, ಪ್ರಾಣೇಶ ಬೆಳ್ಳಟ್ಟಿ, ದಿಲೀಪ್ ಜೋಶಿ, ವೆಂಕಟೇಶ ಗುಡಿ, ರಾಜಾಚಾರ್ಯ ರಾಯಚೂರ, ಕೆ.ಎಸ್. ಕುಲಕರ್ಣಿ, ನಾರಾಯಣ ಪಾಟೀಲ ಕುಲಕರ್ಣಿ, ಗುರುರಾಜ ಪಾಟೀಲ ಕುಲಕರ್ಣಿ, ದತ್ತಾತ್ರೇಯ ಪಾಟೀಲ ಕುಲಕರ್ಣಿ, ಶ್ರೀಕಾಂತ ಪೂಜಾರ, ದಿಗಂಬರ ಪೂಜಾರ ಮುಂತಾದವರಿದ್ದರು.

# ನರೇಗಲ್ಲ ಶಿಕ್ಷಣಕ್ಕೆ ಹೆಸರುವಾಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕನ್ನಡ ಎಂ.ಎ.ಯಲ್ಲಿ ಬಂಗಾರದ ಪದಕವನ್ನು ಪಡೆಯುವ ಮೂಲಕ ಪೂಜಾ ಗ್ರಾಮಪುರೋಹಿತ ನರೇಗಲ್ಲ ಪಟ್ಟಣದ ಕೀರ್ತಿಯನ್ನು ಬಾನೆತ್ತರಕ್ಕೆ ಏರಿಸಿದ್ದಾಳೆ. ಅವಳು ಭವಿಷ್ಯದಲ್ಲಿ ಇನ್ನೂ ಹೆಚ್ಚಿನ ಸಾಧನೆ ಮಾಡಲಿ ಎಂದು ರೋಣ ಮಂಡಲ ಬಿಜೆಪಿ ಅಧ್ಯಕ್ಷ ಮುತ್ತಣ್ಣ ಕಡಗದ ಹೇಳಿದರು. ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ರೋಣ ಬಿಜೆಪಿ ಮಂಡಳದ ವತಿಯಿಂದ ಪೂಜಾಳನ್ನು ಸನ್ಮಾನಿಸಿ ಅವರು ಮಾತನಾಡಿದರು. ವಿದ್ಯಾಭ್ಯಾಸದ ಸಮಯದಲ್ಲಿ ವಿಶೇಷ ಗಮನವನ್ನಿಟ್ಟು ಅಧ್ಯಯನ ಮಾಡಿದರೆ ಉತ್ತಮ ಸಾಧನೆ ಮಾಡಬಹುದು ಎಂಬುದನ್ನು ಪೂಜಾ ಸಾಧಿಸಿ ತೋರಿಸಿದ್ದಾರೆ. ಈ ಮೂಲಕ ಅವರು ಇತರೆ ಎಲ್ಲ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದಾರೆ. ಈಗ ಅಧ್ಯಯನದಲ್ಲಿ ತೊಡಗಿರುವ ವಿದ್ಯಾರ್ಥಿಗಳು ಪೂಜಾರನ್ನು ಮಾದರಿಯಾಗಿಟ್ಟುಕೊಂಡು ತಮ್ಮ ಅಧ್ಯಯನದ ವೇಳಾ ಪತ್ರಿಕೆಯನ್ನು ತಯಾರಿಸಿಕೊಳ್ಳಬೇಕೆಂದರು.

ಶಹರ ಬಿಜೆಪಿ ಘಟಕದ ಅಧ್ಯಕ್ಷ, ನ್ಯಾಯವಾದಿ ಉಮೇಶ ಸಂಗನಾಳಮಠ ಮಾತನಾಡಿ, ನರೇಗಲ್ಲ ಎಂದಿಗೂ ಶಿಕ್ಷಣಕ್ಕೆ ಹೆಸರುವಾಸಿಯಾಗಿದೆ. ಶ್ರೀ ಅನ್ನದಾನೇಶ್ವರ ಮಹಾಸ್ವಾಮಿಗಳವರು ಸ್ಥಾಪಿಸಿರುವ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳ ಬಾಳಿಗೆ ಬೆಳಕನ್ನು ನೀಡುತ್ತಿವೆ. ಇಂತಹ ಸಂಸ್ಥೆಯ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಓದಿದ ಪೂಜಾ ಇಡೀ ಪಟ್ಟಣವೇ ಹೆಮ್ಮೆ ಪಡುವಂತಹ ಸಾಧನೆಯನ್ನು ಮಾಡಿದ್ದಾರೆ. ಅವರಿಗೆ ನಮ್ಮ ಬಿಜೆಪಿ ಘಟಕದ ಪರವಾಗಿ ಹಾರ್ದಿಕ ಅಭಿನಂದನೆಗಳು ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಉಮೇಶ ಪಾಟೀಲ, ಪ್ರಧಾನ ಕಾರ್ಯದರ್ಶಿಗಳಾದ ಶಿವಕುಮಾರ ದಡ್ಡೂರ, ಚಂದ್ರು ಕುರಿ, ಶಶಿಧರ ಸಂಕನಗೌಡ್ರ, ಮಹೇಶ ಶಿವಶಿಂಪ್ರ, ಚರಣ ಕಟ್ಟಿ ಮುಂತಾದವರಿದ್ದರು.




ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಅಂಗವಾಗಿ ಜಿಲ್ಲೆಗೆ ಬುಧವಾರ ಬೆಳಿಗ್ಗೆ ಆಗಮಿಸಿದ ಕಿತ್ತೂರು ರಾಣಿ ಚನ್ನಮ್ಮ ವಿಜಯ ಜ್ಯೋತಿ ಯಾತ್ರಾ ರಥವನ್ನು ಜಿಲ್ಲಾಧಿಕಾರಿ ದಿವ್ಯ ಪ್ರಭು ಡಿಸಿ ಕಚೇರಿ ಮುಂಭಾಗದಲ್ಲಿ ಸ್ವಾಗತಿಸಿ, ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕರು ಹಾಗೂ ಕವಿವ ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ, ತಹಸೀಲ್ದಾರ ಡಿ.ಎಚ್. ಹೂಗಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಕನ್ನಡ ಪರ ಸಂಘಟನೆಗಳ ಮುಖಂಡರು, ಕಾರ್ಯಕರ್ತರು, ಸಾರ್ವಜನಿಕರು ಉಪಸ್ಥಿತರಿದ್ದರು.

## ನನ್ನನ್ನು ಬಂಧಿಸಿ ED ಅಧಿಕಾರಿಗಳು 3 ತಿಂಗಳ ಕಾಲ ಕಿರುಕುಳ ನೀಡಿದ್ದಾರೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನನ್ನನ್ನು ಬಂಧಿಸಿ ಇಡಿ ಅಧಿಕಾರಿಗಳು 3 ತಿಂಗಳ ಕಾಲ ಕಿರುಕುಳ ನೀಡಿದ್ದಾರೆ ಎಂದು ಮಾಜಿ ಸಚಿವ ಬಿ.ನಾಗೇಂದ್ರ ಹೇಳಿದರು. ಪರಪ್ಪನ ಅಗ್ರಹಾರ ಜೈಲಿನಿಂದ ಬಿಡುಗಡೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ನಿಗಮ ಹಗರಣದಲ್ಲಿ ನನ್ನಿಂದ ಯಾವುದೇ ತಪ್ಪು ನಡೆದಿಲ್ಲ, ಆದರೂ ನನ್ನನ್ನು ಬಂಧಿಸಿ ಇಡಿ ಅಧಿಕಾರಿಗಳು 3 ತಿಂಗಳ ಕಾಲ ಕಿರುಕುಳ ನೀಡಿದ್ದಾರೆ. ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಹೆಸರು ಹೇಳುವಂತೆ ಕಿರುಕುಳ ನೀಡಿದ್ದಾರೆ. ಬಿಜೆಪಿಯ ಹಿರಿಯ ನಾಯಕರ ಒತ್ತಡದಿಂದ ಹೀಗೆ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.


ಕರ್ನಾಟಕ ಸರಕಾರ

ಜಿಲ್ಲಾ ಪಂಚಾಯತ, ಗದಗ.

**ಕಾರ್ಯನಿರ್ವಾಹಕ ಇಂಜಿನೀಯರ, ಪಂ.ರಾಜ್.ಇಂ. ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2024-25/1711 ದಿನಾಂಕ: 15/10/2024

**ಕೆಪಿಪಿ ಪೋರ್ಟಲ್ ಟೆಂಡರ್ ಪ್ರಕಟಣೆ**

**Standard Bid Document KW-1**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1 ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 14 ಕಾಮಗಾರಿಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2023-24ನೇ ಸಾಲಿನ ಶ್ರೀ ಎಸ್.ವಿ. ಸಂಕನೂರ ಮಾನ್ಯ ವಿಧಾನ ಪರಿಷತ್ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ 2024-25 ನೇ ಸಾಲಿನ ಜಿಲ್ಲಾ ಪಂಚಾಯತ್ 3054 ಸಿ.ಎಮ್.ಜಿ.ಎಸ್.ವಾಯ್ ಯೋಜನೆ, 2023-24 ನೇ ಸಾಲಿನ ಪದವಿ ಪೂರ್ವ ಕಾಲೇಜು ಕೊಠಡಿ ದುರಸ್ಥಿ, 2024-25 ನೇ ಸಾಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ (ಒಗ್ಗೂಡಿಸುವಿಕೆ) 2023-24 ನೇ ಸಾಲಿನ ಎಸ್.ಡಿ.ಪಿ ಅಭಿವೃದ್ಧಿ ವಿಶೇಷ ಯೋಜನೆ, 2018-19 ನೇ ಸಾಲಿನ ಶ್ರೀ ಶಿವಕುಮಾರ ಉದಾಸಿ ಮಾನ್ಯ ರಾಜ್ಯ ಸಭಾ ಸದಸ್ಯರ ಅನುದಾನ, 2015-16 ನೇ ಸಾಲಿನ ಆರ್.ಜಿ.ಪಿ.ಎಸ್.ಎ ಅನುದಾನದಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

**Indent Nos: RDPR/2024-25/WORK_INDENT :**

**9739, 9734, 9733, 9731, 9683, 9680, 9730,**

**9005, 9008, 9580, 9562, 9561, 9585, 9589.**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. 3.35 ಲಕ್ಷ ಮತ್ತು ಗರಿಷ್ಠ ಮೊತ್ತ ರೂ. 15.63 ಲಕ್ಷಗಳು ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ: ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ: **18-10-2024** ರಿಂದ **04-11-2024** ರಂದು 16.30 ಗಂಟೆಯವರೆಗೆ. ಆರ್ಥಿಕ ಬಿಡ್ ತೆರೆಯುವ ದಿನಾಂಕ: **06-11-2024** ರಂದು 16.30 ಘಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ, ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ದತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಛೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು**

**ವಾ.ಸಾ.ಇ/ಗದಗ/299/ದೇಶಪಾಂಡೆಪಬ್ಲಿಸಿಟಿ/2024-25 ಪಂ.ರಾಜ್.ಇಂಜಿನೀಯರಿಂಗ್ ವಿಭಾಗ, ಗದಗ**


# ಕಾರಟಗಿ ಪುರಸಭೆ ಅವ್ಯವಹಾರ ತನಿಖೆ ಮಾಡಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕಾರಟಗಿ ಪುರಸಭೆಯ ವಿವಿಧ ಕಾಮಗಾರಿಗಳಲ್ಲಿ ಅವ್ಯವಹಾರ ನಡೆಯುತ್ತಿದೆ. ಅಲ್ಲದೇ ಖಾಸಗಿಯವರ ಜಾಗೆಯಲ್ಲಿ ಇಂದಿರಾ ಕ್ಯಾಂಟಿನ್ ನಿರ್ಮಾಣವಾಗುತ್ತಿದೆ. ಇದನ್ನು ಪರಿಶೀಲಿಸಿ, ಸಮಿತಿಯನ್ನು ರಚನೆ ಮಾಡಬೇಕು. ತನಿಖಾ ವರದಿಯನ್ನು ಬಹಿರಂಗ ಪಡಿಸಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ನವೀನ ಗುಳಗಣ್ಣನವರ ಹೇಳಿದರು.



ನಗರದ ಕೆಯೂಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಕಾರಟಗಿ ಪುರಸಭೆಯ ವ್ಯಾಪ್ತಿಯಲ್ಲಿ 87 ಲಕ್ಷ ರೂ. ವೆಚ್ಚದಲ್ಲಿ ಇಂದಿರಾ ಕ್ಯಾಂಟಿನ್ ನಿರ್ಮಾಣ ಮಾಡುವುದು ಒಳ್ಳೆಯದು. ಆದರೆ ನರಸಿಂಹಾಚಾರ್ಯ ಎನ್ನುವವರಿಗೆ ಸೇರಿದ ಜಾಗೆಯಲ್ಲಿ ಇಂದಿರಾ ಕ್ಯಾಂಟಿನ ನಿರ್ಮಾಣ ಮಾಡಲಾಗುತ್ತಿದೆ. ಈ ಜಾಗೆ ಕಾನೂನು ತೊಡಕಿನಲ್ಲಿದೆ. 87 ಲಕ್ಷ ರೂ. ಹಣ ವ್ಯಯಿಸುತ್ತಿದ್ದು, ಇದನ್ನು ಸರ್ಕಾರಿ ಜಾಗೆಯಲ್ಲಿ ನಿರ್ಮಿಸಿದರೆ, ಅನುಕೂಲ ಆಗಲಿದೆ. ಈ ಕುರಿತು ಪುರಸಭೆ ಮುಖ್ಯಾಧಿಕಾರಿ, ಜಿಲ್ಲಾಧಿಕಾರಿ ನಲಿನ್ ಅತುಲ್ ಗೆ ಮನವಿ ಸಲ್ಲಿಸಿದ್ದೇವೆ. ಆದರೂ ಯಾವುದೇ ಪ್ರಯೋಜನ ಆಗಿಲ್ಲ ಎಂದರು. ಡಿಸೇಲ್ ಬಿಲ್ ಗೆ ಸಂಬಂಧಿಸಿದಂತೆ ಸಾಮಾನ್ಯ ಸಭೆ ಆಗುವುದಕ್ಕಿಂತ ಮುಂಚೆ 3 ಲಕ್ಷ ರೂ. ಬರುತ್ತಿತ್ತು. ಈಗ ಕಳೆದ ಒಂದು ತಿಂಗಳ ಹಿಂದೆ 1.15 ಲಕ್ಷ ರೂ. ಬಂದಿದೆ. ಕಳೆದ ಎರಡು ವರ್ಷಕ್ಕೂ ಹೆಚ್ಚು ತಿಂಗಳು ಆಡಳಿತಾಧಿಕಾರಿ ನೇಮಿಸಲಾಗಿತ್ತು. ಕಳೆದ ಒಂದೆರಡು ತಿಂಗಳ ಹಿಂದೆ ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯಾಗಿದ್ದು, ಈ ತಿಂಗಳಲ್ಲಿ 1.15 ಲಕ್ಷ ರೂ. ಬಂದಿದೆ. ಇದರಿಂದಾಗಿ ಸುಮಾರು ಪ್ರತಿ ತಿಂಗಳು ಸುಮಾರು 2 ಲಕ್ಷ ರೂ. ಲೋಪದೋಷ ಕಂಡುಬಂದಿದೆ. ಅಲ್ಲದೇ ಆಡಳಿತಾಧಿಕಾರಿ ನೇಮಕವಾದಾಗಲೇ ಕಸದ ಬುಟ್ಟಿ ಖರೀದಿಸಿದ್ದು, 50 ಲೀಟರ್ ಸಾಮರ್ಥ್ಯದ ಕಸದಬುಟ್ಟಿಗೆ 1,550 ರೂ. ಬಿಲ್ ಮಾಡಿದ್ದಾರೆ. ಆದರೆ ದೊಡ್ಡ ಕಂಪನಿಯ ಕಸದಬುಟ್ಟಿಗಳೇ 800 ರೂ. ಗೆ ಸಿಗುತ್ತವೆ. ಅಲ್ಲದೇ ಯಾವ ವಾರ್ಡಿಗೂ ವಿತರಣೆ ಮಾಡಿಲ್ಲ. ಈ ಬಗ್ಗೆ ಯಾವುದೇ ದಾಖಲೆಗಳೂ ಇಲ್ಲ. ಕಸದ ಬುಟ್ಟಿ ಖರೀದಿಸದೇ ಬೋಗಸ್ ಬಿಲ್ ಸೃಷ್ಟಿಸಿ, ಹಣ ಬಿಡುಗಡೆ ಮಾಡಿಕೊಂಡಿದ್ದಾರೆ. ಹಾಗಾಗಿ ಇವೆಲ್ಲವನ್ನೂ ತನಿಖೆ ಮಾಡಿ, ವರದಿಯನ್ನು ಬಹಿರಂಗ ಪಡಿಸಬೇಕು ಎಂದು ಒತ್ತಾಯಿಸಿದರು.

ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಮಾತನಾಡಿ, ಇಂದಿರಾ ಕ್ಯಾಂಟಿನ್ ನಿರ್ಮಿಸಬೇಕು ಎಂಬ ಒತ್ತಡ ಜಿಲ್ಲಾಧಿಕಾರಿ ಮೇಲೆ ಇದ್ದು, ಹಾಗಾಗಿ ಮಾನದಂಡಗಳನ್ನು ನೋಡದೇ, ತರಾತುರಿಯಲ್ಲಿ ನಿರ್ಮಿಸುತ್ತಿದ್ದಾರೆ. ಹಾಗಾಗಿ ಕೆಲವೊಂದು ಸಮಸ್ಯೆ ಉಂಟಾಗುತ್ತಿದೆ. ಕಾರಟಗಿ ಪುರಸಭೆಯಲ್ಲೂ ಖಾಸಗಿಯವರ ಜಾಗೆಯಲ್ಲಿ ನಿರ್ಮಿಸಿದ್ದು, ಇನ್ನು ಭಾಗ್ಯನಗರ ಪಟ್ಟಣದಲ್ಲೂ ಆಂಜನೇಯನ ಜಾತ್ರೆ ನಡೆಯುವ ಸ್ಥಳದಲ್ಲಿಯೇ ಇಂದಿರಾ ಕ್ಯಾಂಟಿನ್ ನಿರ್ಮಿಸಿದ್ದಾರೆ. ಇದಕ್ಕೂ ವಿರೋಧ ಮಾಡಿದರೂ, ರಾತ್ರೋರಾತ್ರಿ ಕ್ಯಾಂಟಿನ ಕಾಮಗಾರಿ ಆರಂಭಿಸಿದ್ದಾರೆ ದಬ್ಬಾಳಿಕೆ ಮಾಡಿದ್ದಾರೆ ಎಂದರು.

ಕಾರಟಗಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಬಸವರಾಜ ಎತ್ತಿನಮನಿ, ಪುರಸಭೆ ಸದಸ್ಯರಾದ ಆನಂದ ಎನ್., ಫಕೀರಪ್ಪ, ಮುಖಂಡ ಧನಂಜಯ ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka